ಸಂಪುಟ : 9 ಸಂಚಿಕೆ 203 ಪುಟ : 4 ಬೆಲೆ: 3.00 ಶುಕ್ರವಾರ ಸೆಪ್ಟೆಂಬರ್ 20 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 203 Pages : 4 Price : 3.00 Friday september 20 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನೇರ ಸಂದರ್ಶನ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯಿಂದ ಸೆ.21ರಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 3 ಗಂಟೆಯವರಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ರೂಮ್ ನಂಬರ್-215, ಜಿಲ್ಲಾ ಆಡಳಿತ ಭವನ ಗದಗ ಇಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ನೇರ ಸಂದರ್ಶನದಲ್ಲಿ ಐಡಿಎಫ್‌ಸಿ ಫಸ್ಟ್ ಭಾರತ-ಗದಗ, ರ್‍ಯಾಂಡ್ ಸ್ಟ್ಯಾಂಡ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ (ಎಸ್.ಬಿ.ಐ ಕ್ರೆಡಿಟ್ ಕಾರ್ಡ್ ಸೇಲ್) ಕಂಪನಿಗಳು ಭಾಗವಹಿಲಿವೆ. ನೇರ ಸಂರ್ದಶನದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝರಾಕ್ಸ್ ಪ್ರತಿಗಳು, 3 ರೆಸ್ಯೂಮ್(ಬಯೋಡಾಟಾ) ಪ್ರತಿಗಳು ಮತ್ತು ಆಧಾರ ಕಾರ್ಡ್ ಝರಾಕ್ಸ್‌ನೊಂದಿಗೆ ಭಾಗವಹಿಸಬಹುದು.

ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿಯನ್ನು ಅಂದೇ ಕಡ್ಡಾಯವಾಗಿ ಮಾಡಿಸಬೇಕಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ-08372-220609, 6363330688ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಗದಗ ಜಿಲ್ಲಾ ಉದ್ಯೋಗಾಧಿಕಾರಿಗಳಾದ ಬಸವಚಿತ ಪಿ.ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೊಯ್ಸಳ, ಕೆಳದಿ ಚನ್ನಮ್ಮ ಪ್ರಶಸ್ತಿ ಯೋಜನೆಯಡಿ ಅರ್ಜಿ ಆಹ್ವಾನ

## ಜಿಲ್ಲಾ ಮಟ್ಟದ ಅಸಾಧಾರಣ ಪ್ರತಿಭಾ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಹೊಯ್ಸಳ ಮತ್ತು ಕೆಳದಿ ಚನ್ನಮ್ಮ ಪ್ರಶಸ್ತಿ ಯೋಜನೆಯಡಿ ಜಿಲ್ಲಾ ಮಟ್ಟದ ಅಸಾಧಾರಣಾ ಪ್ರತಿಭಾ ಪುರಸ್ಕಾರಕ್ಕಾಗಿ ನಾವೀನ್ಯತೆ, ತಾರ್ಕಿಕ, ಕ್ರೀಡೆ, ಕಲೆ, ಸಾಂಸ್ಕೃತಿಕ, ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ 'ಅಸಾಧಾರಣ ಪ್ರತಿಭಾ ಪುರಸ್ಕಾರ' ಪ್ರಶಸ್ತಿಯನ್ನು ನೀಡಲು 5ರಿಂದ 18 ವರ್ಷದ ಒಳಗಿನ ವಯೋಮಿತಿಯೊಳಗಿರುವ ಮಕ್ಕಳಿಗೆ ಪ್ರತಿ ಕ್ಷೇತ್ರದಲ್ಲಿ ಇಬ್ಬರು ಮಕ್ಕಳಂತೆ ಒಟ್ಟು 8 ಮಕ್ಕಳನ್ನು ಪ್ರಶಸ್ತಿಗೆ ಆಯ್ಕೆ ಮಾಡಲು ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆ.

ಆಯ್ಕೆಯಾದ ಪ್ರತಿ ಮಗುವಿಗೆ ತಲಾ ರೂ.10,000 ನಗದು ಮತ್ತು ಪ್ರಶಸ್ತಿ ಪತ್ರವನ್ನು ನೀಡಲಾಗುತ್ತಿದೆ. ಅಸಾಧಾರಣ ಸಾಧನೆ ಮಾಡಿದ ಮಕ್ಕಳು ಅಕ್ಟೋಬರ್ 5ರ ಸಂಜೆ 5.30ರೊಳಗೆ ಅರ್ಜಿಯನ್ನು ಸಲ್ಲಿಸಲು ತಿಳಿಸಿದೆ.

ನಾವೀನ್ಯತೆ, ತಾರ್ಕಿಕ, ಕ್ರೀಡೆ, ಕಲೆ, ಸಾಂಸ್ಕೃತಿಕ, ಸಂಗೀತ (ಮೂರು ಸೇರಿ ಒಂದು ಕ್ಷೇತ್ರ) ಈ ಕ್ಷೇತ್ರಗಳಲ್ಲಿ ತಮಗೆ ಸಂಬಂಧಿಸಿದ ಒಂದು ಕ್ಷೇತ್ರಕ್ಕೆ ಮಾತ್ರ ಆಯ್ಕೆ ಮಾಡಿಕೊಳ್ಳುವುದು. ಪ್ರತಿಭೆಯನ್ನು ಹೊಂದಿರುವ ಬಗ್ಗೆ ಪ್ರಮುಖ ದಿನಪತ್ರಿಕೆಯಲ್ಲಿ ಪ್ರಕಟಗೊಂಡಿರುವ ಪತ್ರಿಕಾ ತುಣುಕುಗಳನ್ನು ಲಗತ್ತಿಸುವುದು. ಅಂತಾರಾಷ್ಟ್ರೀಯ ಮಟ್ಟದಲ್ಲಿ/ರಾಷ್ಟ್ರ ಮಟ್ಟದಲ್ಲಿ/ ರಾಜ್ಯ ಮಟ್ಟದಲ್ಲಿ/ ಜಿಲ್ಲಾ ಮಟ್ಟದಲ್ಲಿ/ ತಾಲೂಕಾ ಮಟ್ಟದಲ್ಲಿ ಭಾಗವಹಿಸಿರುವ ಪ್ರಶಸ್ತಿ/ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು.

ಅರ್ಜಿದಾರರು 5ರಿಂದ 18 ವರ್ಷದೊಳಗಿನ ವಯೋಮಿತಿ ಹೊಂದಿರಬೇಕು. (ಜುಲೈ 31 ಕ್ಕೆ)ವಯಸ್ಸಿನ ಬಗ್ಗೆ ಜನನ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ಧೃಢೀಕರಣ ಮಾಡಿಸಿದ ಪ್ರತಿ ಲಗತ್ತಿಸಬೇಕು. ಹಿಂದಿನ ವರ್ಷಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಅಸಾಧಾರಣ ಪ್ರಶಸ್ತಿ ಪಡೆದ ಮಕ್ಕಳಿಗೆ ಪುನಃ ಪ್ರಶಸ್ತಿ ನೀಡಲು ಅವಕಾಶವಿರುವುದಿಲ್ಲ. ಅರ್ಜಿಯನ್ನು ದ್ವಿಪ್ರತಿಯಲ್ಲಿ ಸಲ್ಲಿಸುವುದು.

ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕೊಠಡಿ ಸಂಖ್ಯೆ-006, ಜಿಲ್ಲಾ ಆಡಳಿತ ಭವನ, ಗದಗ-582101, ದೂರವಾಣಿ ಸಂಖ್ಯೆ-08372-220711 ಸಂಪರ್ಕಿಸಬಹುದಾಗಿದೆ.

ಸಾಧಿಸಿರುವ ಪ್ರತಿಭೆಯನ್ನು ಸಮರ್ಥಿಸಲು ಸಂಬಂಧಿಸಿದ ಕ್ಷೇತ್ರದ ಛಾಯಾ ಚಿತ್ರ ಲಗತ್ತಿಸುವುದು. ಆಯ್ಕೆ ಮಾಡುವ ಕ್ಷೇತ್ರದ ಬಗ್ಗೆ ನಾಲ್ಕು ಸಾಲುಗಳಲ್ಲಿ ಮಾಹಿತಿ ಒದಗಿಸುವುದು. ಪ್ರಶಸ್ತಿಗಾಗಿ ಆಯ್ಕೆ ಮಾಡುವ ಮಕ್ಕಳು ಕನಿಷ್ಠ 5 ವರ್ಷ ಕರ್ನಾಟಕ ರಾಜ್ಯದಲ್ಲಿ ನೆಲೆಸಿದ್ದು, ಈ ಬಗ್ಗೆ ಸ್ವಯಂ ದೃಢೀಕರಣ ಪಡೆಯಬೇಕು. ಪ್ರಶಸ್ತಿಗೆ ಅರ್ಜಿ ಸಲ್ಲಿಸಿದ ನಂತರ ಮಗು ಮರಣ ಹೊಂದಿದಲ್ಲಿ ಆ ಮಗು ಪ್ರಶಸ್ತಿಗೆ ಅರ್ಹವಾಗಿದ್ದಲ್ಲಿ ಮರಣೋತ್ತರ ಪ್ರಶಸ್ತಿಗೆ ಪರಿಗಣಿಸಬಹುದಾಗಿದೆ.

### ಸ್ನಾತಕೋತ್ತರ ಕೇಂದ್ರದ ನೂತನ ಕಟ್ಟಡ ಲೋಕಾರ್ಪಣೆಗೊಳಿಸಿದ ಸಚಿವ ಎಚ್.ಕೆ. ಪಾಟೀಲ

# ಶಿಕ್ಷಣ ವ್ಯವಸ್ಥೆ ಪರಿವರ್ತನೆಯಾಗಬೇಕಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ವಿಶ್ವವಿದ್ಯಾಲಯಗಳ ಸುಧಾರಣೆಗಾಗಿ ರಾಜ್ಯ ಸರ್ಕಾರವು ಉನ್ನತ ಮಟ್ಟದ ಸಮಿತಿ ರಚನೆ ಮಾಡುವ ಅಗತ್ಯವಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಗದಗ ಸ್ನಾತಕೋತ್ತರ ಕೇಂದ್ರದಿಂದ ಕಳಸಾಪುರದಲ್ಲಿ ನಿರ್ಮಿಸಲಾದ ಸ್ನಾತಕೋತ್ತರ ಕೇಂದ್ರದ ನೂತನ ಕಟ್ಟಡವನ್ನು ಗುರುವಾರ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ವಿಶ್ವ ವಿದ್ಯಾಲಯಗಳ ವ್ಯವಸ್ಥೆ ಶಿಕ್ಷಣದ ಗುಣಮಟ್ಟ ಸುಧಾರಣೆಯಾಗಬೇಕು. ಅದಕ್ಕಾಗಿ ಸರ್ಕಾರ ಉನ್ನತ ಮಟ್ಟದ ಸಮಿತಿಯ ರಚನೆ ಮಾಡುವುದರ ಮೂಲಕ ಗುಣಮಟ್ಟ ಸುಧಾರಣೆಗೆ ಮುಂದಾಗಬೇಕಿದೆ. ವಿಶ್ವ ವಿದ್ಯಾಲಯಗಳ ಸಿಂಡಿಕೇಟ್ ಸದಸ್ಯರು ಸಭೆಗಳಲ್ಲಿ ತಮ್ಮನ್ನು ತಾವು ಸಂಪೂರ್ಣವಾಗಿ ತೊಡಗಿಸಿಕೊಂಡು ಪ್ರಾಮಾಣಿಕತೆಯಿಂದ ಕಾರ್ಯ ನಿರ್ವಹಿಸುವ ಮೂಲಕ ನಿಮ್ಮ ವ್ಯಕ್ತಿತ್ವವನ್ನು ಉನ್ನತ ಮಟ್ಟಕ್ಕೆ ಒಯ್ಯಲು ಸಹಕಾರಿಯಾಗಿವೆ. ವಿಶ್ವ ವಿದ್ಯಾಲಯಗಳಲ್ಲಿ ಶೇ.70ರಷ್ಟು ಬೋಧಕ ಹುದ್ದೆಗಳು ಖಾಲಿ ಇದ್ದು, ಮುನ್ನಡೆಸುವುದು ಕಷ್ಟಸಾಧ್ಯವಾಗಿದೆ. ವಿದ್ಯಾರ್ಥಿಗಳ ಸಂಖ್ಯೆ ಅಧಿಕವಾಗುತ್ತಿದ್ದು ಶಿಕ್ಷಕರ ಸಂಖ್ಯೆ ಕ್ಷೀಣಿಸುತ್ತಿದೆ. ಜೊತೆಗೆ ವಿ.ವಿಗಳಿಗೆ ನೀಡುವ ಅನುದಾನ ಸಹ ಅಗಾಧ ಪ್ರಮಾಣದಲ್ಲಿ ಕುಂಠಿತವಾಗಿದೆ. ಕಳೆದ 5 ವರ್ಷದಲ್ಲಿ ವಿಶ್ವ ವಿದ್ಯಾಲಯಗಳ ಅಭಿವೃದ್ಧಿಗಾಗಿ ಅನುದಾನ ಬಂದಿಲ್ಲ. ಇದರಿಂದ ಮೂಲ ಸೌಕರ್ಯಗಳ ಅಭಿವೃದ್ಧಿ ಜೊತೆಗೆ ಶಿಕ್ಷಣದ ಗುಣಮಟ್ಟ ಕಾಯ್ದುಕೊಳ್ಳುವುದು ಸವಾಲಾಗಿದೆ ಎಂದು ಹೇಳಿದರು.

ಗದಗ ಸ್ನಾತಕೋತ್ತರ ಕಟ್ಟಡದ ಮೊದಲ ಹಂತದ ಕಾಮಗಾರಿಯನ್ನು 9 ಕೋಟಿ ರೂಗಳಲ್ಲಿ ಕೈಗೊಳ್ಳಲಾಗಿದೆ. ಸ್ನಾತಕೋತ್ತರ ಕಟ್ಟಡದ ಸಂಪೂರ್ಣ ಕಾಮಗಾರಿಗೆ 25ರಿಂದ 30 ಕೋಟಿ ರೂ.ಗಳ ಅನುದಾನ ಅಗತ್ಯವಿದೆ. ಜೊತೆಗೆ ಬೋಧಕ ಸಿಬ್ಬಂದಿಗಳ ಅಗತ್ಯವಿದು ಈ ಬಗ್ಗೆ ಸಂಪೂರ್ಣ ಸಹಕಾರ ಒದಗಿಸಲಾಗುವುದು ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.



ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಗದಗ ಜಿಲ್ಲೆಯಲ್ಲಿ ಸ್ನಾತಕೋತ್ತರ ಕೇಂದ್ರ ಆರಂಭವಾಗಿ 24 ವರ್ಷಗಳು ಕಳೆದಿವೆ. ಈಗ ಸ್ವಂತ ಕಟ್ಟಡ ಆಗಿರುವುದು ಸಂತಸ ತಂದಿದೆ.

> ದೇಶದಲ್ಲಿ ಉನ್ನತ ಶಿಕ್ಷಣ ನಿರ್ಲಕ್ಷ್ಯಕ್ಕೊಳಗಾಗಿದೆ. ಇದೇ ರೀತಿ ಮುಂದುವರೆದಲ್ಲಿ ವಿಶ್ವ ವಿದ್ಯಾಲಯಗಳು ಸ್ಥಿತ್ಯಂತರ ಆಗಲಿವೆ. ಶಿಕ್ಷಣ ವ್ಯವಸ್ಥೆ ಬದಲಾವಣೆಯೊಂದಿಗೆ ಪರಿವರ್ತನೆಯಾಗಬೇಕು. ಸಮಾಜಕ್ಕೆ ಬೇಕಾದ ಮಕ್ಕಳನ್ನು ತಿದ್ದಿ ತೀಡಿ ಅಣಿಗೊಳಿಸದಿದ್ದರೆ ವಿಶ್ವ ವಿದ್ಯಾಲಯಗಳಿಗೆ ಗಂಡಾಂತರವಿದೆ.
>
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ, ಬಸವರಾಜ ರಾಯರೆಡ್ಡಿ ಸಹಕಾರದಿಂದ ಕಟ್ಟಡ ನಿರ್ಮಾಣ ಸಾಧ್ಯವಾಗಿದೆ ಎಂದು ಹೇಳಿದರು.

▸▸ 3ನೇ ಪುಟಕ್ಕೆ



### 'ನಾಟ್ಯಾಂಜಲಿ-24' ಕಾರ್ಯಕ್ರಮದಲ್ಲಿ ನಾಗರತ್ನ ಹಡಗಲಿ ಅಭಿಮತ

# ಪ್ರತಿಭೆಗಳನ್ನು ಗುರುತಿಸುವ ಕೆಲಸವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ದಿನಗಳಲ್ಲಿ ಮಕ್ಕಳು ದೇಶೀಯ ಕಲೆಗಳಿಂದ ದೂರಾಗುತ್ತಿದ್ದು, ಪಾಲಕರು ಮಕ್ಕಳಿಗೆ ಮೊಬೈಲ್‌ಗಳನ್ನು ನೀಡದೆ ಅವರಲ್ಲಿರುವ ಪ್ರತಿಭೆಗಳನ್ನು ಗುರುತಿಸುವ ಕೆಲಸ ಮಾಡಬೇಕು ಎಂದು ಧಾರವಾಡದ ರತಿಕಾ ನೃತ್ಯ ನಿಕೇತನ ಭರತನಾಟ್ಯ ಶಾಲೆಯ ನಿರ್ದೇಶಕಿ, ವಿದುಷಿ ನಾಗರತ್ನ ಹಡಗಲಿ ಹೇಳಿದರು.

ನಗರದ ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ನಿಮಿಷಾಂಬ ಜ್ಯೋತಿಶ್ರೀ ನಾಟ್ಯ ಅಕಾಡೆಮಿಯ 3ನೇ ವಾರ್ಷಿಕೋತ್ಸವದ ಅಂಗವಾಗಿ ಜರುಗಿದ 'ನಾಟ್ಯಾಂಜಲಿ-24' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಾಟ್ಯಕಲೆ ನಮ್ಮ ದೇಶದ ಸಂಸ್ಕೃತಿಯಾಗಿದ್ದು, ಪಾಲಕರು ಮಕ್ಕಳಿಗೆ ನೃತ್ಯ ಕಲೆಗಳಲ್ಲಿರುವ ಆಸಕ್ತಿಯನ್ನು ಗುರುತಿಸಿ ಅವರಿಗೆ ಪ್ರೋತ್ಸಾಹ ನೀಡಬೇಕಿದೆ. ನಿಮಿಷಾಂಬ ಜ್ಯೋತಿಶ್ರೀ ನಾಟ್ಯ ಅಕಾಡೆಮಿಯು ವರ್ಷದಿಂದ ವರ್ಷಕ್ಕೆ ಹೆಚ್ಚು ಕ್ರಿಯಾಶೀಲವಾಗಿ ಜಿಲ್ಲೆಯಾದ್ಯಾಂತ ಶಿಬಿರಗಳನ್ನು ನಡೆಸುತ್ತಿದ್ದು, ಮುಂದಿನ ದಿನಗಳಲ್ಲಿ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಪ್ರತಿಭೆಗಳನ್ನು ಬೆಳೆಸುವ ಅಕಾಡೆಮಿ ಆಗಲಿ ಎಂದು ಹಾರೈಸಿದರು.

ಪತ್ರಕರ್ತ ವೆಂಕಟೇಶ ಇಮರಾಪೂರ ಮಾತನಾಡಿ,



ಇಂದಿನ ದಿನಗಳಲ್ಲಿ ಪಾಲಕರು ಮಕ್ಕಳನ್ನು ಅಂಕ ಗಳಿಸುವ ಯಂತ್ರ ಎಂದು ತಿಳಿದಂತಿದೆ. ಅವರ ಒತ್ತಡವನ್ನು ತಡೆದು ಅವರ ಆಸಕ್ತಿಯನ್ನು ಗುರುತಿಸಿ ಸಂಗೀತ, ನೃತ್ಯ, ನಾಟಕ, ಕ್ರೀಡೆ ಸೇರಿದಂತೆ ಹಲವಾರು ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವಂತೆ ಪ್ರೇರಣೆ ನೀಡಬೇಕು ಎಂದರು.

ಅಕಾಡೆಮಿಯ ನಿರ್ದೇಶಕಿ ಜ್ಯೋತಿಶ್ರೀ ಎಂ.ಎಲ್. ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಪಂ. ಪುಟ್ಟರಾಜ ಕವಿ ಗವಾಯಿಗಳವರ ಶಿಷ್ಯರಾದ ಡಾ. ನಾರಾಯಣ ಹಿರೇಕೊಳಚಿ, ಶಿರಹಟ್ಟಿಯ ಅಮೃತ ಭಾತಖಂಡೆ, ಪಾರ್ಶ್ವನಾಥ ಆಂಗ್ಲ ಮಾಧ್ಯಮ ಶಾಲೆಯ ಪ್ರಾಂಶುಪಾಲರಾದ ವಿಜಯಲಕ್ಷ್ಮೀ ಪುರಾಣಿಕ, ಷಡಾಕ್ಷರಿ ಟಿ.ವಿ. ಮುಂತಾದವರು ಉಪಸ್ಥಿತರಿದ್ದರು.

ಹುಬ್ಬಳ್ಳಿಯ ಮೊರಾರ್ಜಿ ವಸತಿ ಶಾಲೆಯ ಸಂಗೀತ ಶಿಕ್ಷಕಿ ನಾಗರತ್ನಾ ಕುಂಬಾರ ಕಾರ್ಯಕ್ರಮ ನಿರೂಪಿಸಿದರು. ನಂತರ ಮಕ್ಕಳಿಂದ ನಡೆದ ನಾಟ್ಯಾಂಜಲಿ ಕಾರ್ಯಕ್ರಮ ಎಲ್ಲರನ್ನೂ ಮನಸೂರೆಗೊಳ್ಳುವಂತೆ ಮಾಡಿತು.

ಮುಳಗುಂದದ ಡಾ. ಎಸ್.ಸಿ. ಚವಡಿ ಮಾತನಾಡಿ, ಈ ಹಿಂದೆ ನಾಟ್ಯ ಕಲೆ ರಾಜರುಗಳ ಗೌರವವಾಗಿತ್ತು. ಅದರೆ, ಈಗ ಸರಕಾರದಿಂದ ಅದನ್ನು ಉಳಿಸಿ-ಬೆಳೆಸಲು ಪ್ರೋತ್ಸಾಹ ನೀಡಬೇಕಾಗಿದೆ. ನೃತ್ಯಕಲೆಯನ್ನು ಉಳಿಸಿ-ಬೆಳಸಲು ಅಕಾಡೆಮಿಯ ನಿರ್ದೇಶಕಿ ಜ್ಯೋತಿಶ್ರೀ ಅವರು ತುಂಬಾ ಶ್ರಮವಹಿಸಿ ಗದಗ ಸೇರಿದಂತೆ ಶಿರಹಟ್ಟಿ, ಮುಂಡರಗಿ, ಮುಳಗುಂದ ಭಾಗಗಳಲ್ಲಿ ಸಂಸ್ಥೆಯನ್ನು ಕಟ್ಟಿ ಬೆಳೆಸುತ್ತಿದ್ದಾರೆ. ನೂರಾರು ಮಕ್ಕಳು ಈ ನೃತ್ಯಕಲೆಯನ್ನು ಕಲಿಯುತ್ತಿರುವುದು ಇದಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

## ರೈತರಿಗೆ ಹಣ ಕೊಡದೆ ಮೋಸ



■ವಿಜಯಸಾಕ್ಷಿ ಸುದ್ದಿ, ಗದಗ

ದಾವಣಗೆರೆ ಮೂಲದ ಮಾರುತಿ ಎನ್ನುವ ವ್ಯಕ್ತಿ ಎನ್‌ಆರ್‌ಎಲ್‌ಎಮ್ ಅಡಿಯಲ್ಲಿ ಜಿಲ್ಲೆಯಲ್ಲಿ ರೈತರಿಂದ ಕಡಲೆಯನ್ನು ಖರಿದಿ ಮಾಡಿ 9 ತಿಂಗಳವರೆಗೂ ಹಣ ನೀಡದೇ ರೈತರನ್ನು ಸತಾಯಿಸುತ್ತಿದ್ದಾರೆ ಎಂದು ರೈತ ಮುಖಂಡ ವಿಜಯಕುಮಾರ ಸುಂಕದ ಆರೋಪಿಸಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ-ಮುಂಡರಗಿ ರೈತರು ಸಚಿವ ಎಚ್.ಕೆ. ಪಾಟೀಲ್ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಗುಂಪಿನ ಮೂಲಕ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರ ಸೂಚನೆಯಂತೆ ಖರೀದಿ ಮಾಡಿದ್ದಾರೆ. ಆದರೂ ರೈತರಿಗೆ ಹಣ ಕೊಡದೆ ಮೋಸ ಮಾಡಲಾಗಿದೆ ಎಂದು ಆರೋಪಿಸಿದರು.

ರೈತರ ಸಮಸ್ಯೆಗೆ ಶೀಘ್ರವೇ ಪರಿಹಾರ ಒದಗಿಸದಿದ್ದರೆ ಸೆ. 23ರಂದು ಚನ್ನಮ್ಮ ವೃತ್ತದಿಂದ ಡಿಸಿ ಕಚೇರಿವರೆಗೆ ಪಾದಯಾತ್ರೆ ನಡೆಸಿ, ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುವುದು. ಅದಕ್ಕೂ ಸ್ಪಂದಿಸದಿದ್ದರೆ ಜಿಲ್ಲಾ ಪಂಚಾಯಿತಿ ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಪ್ರತಿಭಟನೆ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಎಸ್.ಪಿ. ಮುಲ್ಲಾ, ನಾರಾಯಣ ಬಿರಸಲ, ಸೋಮನಾಥ ಲಮಾಣಿ, ಲಕ್ಷ್ಮೀ ಹಿತ್ತಲಮನಿ, ಸರಸ್ವತಿ ದಾಸರ, ಸರಸ್ವತಿ ಬಡಗೇರ, ಶಿವಪ್ಪ ಮುಲಿಮನಿ, ವೆಂಕಣ್ಣ ಮಲ್ಲರೆಡ್ಡಿ, ಸೋಮರಡ್ಡಿ ಹೊಸಮನಿ, ಪಂಚಾಕ್ಷರಯ್ಯ ಬೆಟಗೇರಿಮಠ, ಸಿದ್ದಪ್ಪ ಮಳ್ಳೂರ, ಬಸವರಾಜ ಬಾಳಿಕಾಯಿ, ಮಂಜುನಾಥ ಗೋಡಿ, ವಾಯ್. ಎನ್. ಕೆಂಚನಗೌಡ್ರ, ಆನಂದ ಮುಂತಾದವರು ಉಪಸ್ಥಿತರಿದ್ದರು.

## ಜಿಲ್ಲಾ ಲಿಂಗಾಯತ ಸಮಾವೇಶ ಸೆ. 22ಕ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಮಟ್ಟದ ಮಹಾಸಭಾ ಇದೇ ಸೆ. 22ರಂದು ಜ. ತೋಂಟದ ಸಿದ್ಧರಾಮ ಶ್ರೀಗಳ ನೇತೃತ್ವದಲ್ಲಿ ನಡೆಯಲಿದೆ ಎಂದು ಲಿಂಗಾಯತ ಮಹಾಸಭಾದ ಮುಖಂಡ ಅಶೋಕ ಬರಗುಂಡಿ ತಿಳಿಸಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಲಿಂಗಾಯತರ ಮಹಾಸಭೆಗೆ ರಾಷ್ಟ್ರೀಯ, ರಾಜ್ಯ ನಾಯಕರು, ಪ್ರಗತಿಪರ ಚಿಂತಕರು ಆಗಮಿಸಲಿದ್ದಾರೆ. ಚರಮೂರ್ತಿ ಚರಂತೇಶ್ವರ ವಿರಕ್ತಮಠದ ಪೂ. ಶರಣಬಸವ ಸ್ವಾಮೀಜಿ ಬಸವಬೆಳವಿ ಹಾಗೂ ವಿಜಯಪುರದ ಶರಣತತ್ವ ಪ್ರಸಾರಕರಾದ ಜೆ.ಎಸ್. ಪಾಟೀಲ್ ಚಿಂತನೆಯನ್ನು ಪ್ರಸ್ತುತಪಡಿಸುವರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಜಾಗತಿಕ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಮಹಾ ಪ್ರಧಾನ ಕಾರ್ಯದರ್ಶಿ ಡಾ. ಎಸ್.ಎಮ್. ಜಾಮದಾರ ಆಗಮಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಲೆಕ್ಕಪರಿಶೋಧಕರು ಹಾಗೂ ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭಾದ ಅಧ್ಯಕ್ಷರಾದ ಕೆ.ಎಸ್. ಚೆಟ್ಟಿ ವಹಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶೇಖಣ್ಣ ಕವಳಿಕಾಯಿ, ಜಿ.ಡಿ. ಪಾಟೀಲ್, ಎಸ್.ಎ. ಮುಗದಣ್ಣನವರ, ಪ್ರಕಾಶ್ ಅಸುಂಡಿ, ಶ್ರೀದೇವಿ ಶೆಟ್ಟರ್, ಗೌರಮ್ಮ ಬಡಿಗಣ್ಣನವರ ಉಪಸ್ಥಿತರಿದ್ದರು.

## ಸಾಕ್ಷಿ ಸುಭಾಷಿತ

ನಾವು ಹಿಡಿಯುವ ದಾರಿಯಂತೆ ನಮ್ಮ ಗುರಿ ಸಹ ಇರುತ್ತದೆ. ಗುರಿಗಿಂತ ದಾರಿ ಮುಖ್ಯ

–ಗಾಂಧೀಜಿ

## ಸಂಪಾದಕೀಯ

# ಹನಿ ಟ್ರ್ಯಾಪ್ ರಾಜಕಾರಣ!

ಶಾಸಕ ಮುನಿರತ್ನ ಪ್ರಕರಣ ಹೊರಬಂದ ನಂತರ ರಾಜ್ಯದಲ್ಲಿ ಹನಿಟ್ರ್ಯಾಪ್ ರಾಜಕಾರಣ ವಿಷಯ ಚರ್ಚೆಗೆ ಬಂದಿದೆ. ರಾಜಕಾರಣಿಗಳನ್ನು ವೈಯಕ್ತಿಕವಾಗಿ ತೇಜೋವಧೆ ಮಾಡಲು ಹೆಣ್ಣು ಮಕ್ಕಳನ್ನ ಬಳಕೆ ಮಾಡುವ ಹುನ್ನಾರ ನಡೆದಿರುವ ಸಂಚುಗಳು ಹೊರಬರುತ್ತಿವೆ.

ಹೆಣ್ಣು ಮಕ್ಕಳನ್ನು ಬಳಸಿಕೊಂಡು ಹನಿ ಟ್ರ್ಯಾಪ್ ಮಾಡಿ ಅವರ ವೈಯಕ್ತಿಕ ವರ್ಚಸ್ಸಿಗೆ ಧಕ್ಕೆ ಉಂಟುಮಾಡುವ ಅನೇಕ ಘಟನೆಗಳು ರಾಜ್ಯದಲ್ಲಿ ನಡೆದಿದೆ. ಕಾಂಗ್ರೆಸ್, ಬಿಜೆಪಿ ಮಾತ್ರವಲ್ಲದೆ ಜೆಡಿಎಸ್ ಪಕ್ಷದ ಅನೇಕ ನಾಯಕರು ಹನಿಟ್ರ್ಯಾಪ್‌ಗೆ ಒಳಗಾಗಿ ರಾಜಕೀಯ ಭವಿಷ್ಯವನ್ನೇ ಹಾಳು ಮಾಡಿಕೊಂಡಿದ್ದಾರೆ.

ಅದರಲ್ಲೂ ಇತ್ತೀಚಿನ ದಿನಗಳಲ್ಲಿ ಪ್ರಜ್ವಲ್ ರೇವಣ್ಣ, ಸೂರಜ್ ರೇವಣ್ಣ ಅವರ ಲೈಂಗಿಕ ದೌರ್ಜನ್ಯದ ಪ್ರಕರಣ ಹೊರಬಂದ ನಂತರ ರಾಜ್ಯದಲ್ಲಿ ಬಹುದೊಡ್ಡ ಕೋಲಾಹಲವೇ ಸೃಷ್ಟಿಯಾಗಿತ್ತು. ಇದಕ್ಕೆಲ್ಲ ರಾಜಕೀಯ ಷಡ್ಯಂತ್ರವೇ ಕಾರಣ ಎಂದು ಜೆಡಿಎಸ್ ವರಿಷ್ಠರು ವಾಗ್ದಾಳಿ ನಡೆಸಿದರು.

ಇದು ಕೇವಲ ಕೆಲ ತಿಂಗಳ ಹಿಂದೆ ನಡೆದ ಘಟನೆಗಳಿಗೆ ಸೀಮಿತವಾಗಿಲ್ಲ. ಹಿಂದಿನ ಸರ್ಕಾರದ ಅವಧಿಯಲ್ಲಿ ಮತ್ತು ಅದಕ್ಕಿಂತ ಹಿಂದಿನ ಸರ್ಕಾರದ ಅವಧಿಯಲ್ಲಿಯೂ ಅನೇಕ ರಾಜಕಾರಣಿಗಳು ಹೆಣ್ಣಿನ ಸಹವಾಸದಿಂದ ಹಾಳಾಗಿದ್ದಾರೆ. ಅಂತವರ ಹೆಸರುಗಳನ್ನು ಪಟ್ಟಿ ಮಾಡುತ್ತ ಸಾಗಿದರೆ, ಹನುಮಂತನ ಬಾಲದಂತೆ ಬೆಳೆಯುತ್ತಲೆ ಸಾಗುತ್ತದೆ.

ಆದರೆ ಸದ್ಯಕ್ಕೆ ಮಾರಕ ಏಡ್ಸ್ ರೋಗಿಯೊಬ್ಬರನ್ನು ಬಳಸಿಕೊಂಡು ಹನಿಟ್ರ್ಯಾಪ್ ನಡೆಸುವ ಸಂಚು ರೂಪಿಸಿದ್ದರು ಎನ್ನುವುದು ಆತಂಕ ಮೂಡಿಸುತ್ತದೆ. ರಾಜಕಾರಣದಲ್ಲಿ ವೈಯಕ್ತಿಕ ದ್ವೇಷ ಯಾವ ಮಟ್ಟಿಗೆ ಬೆಳೆಯುತ್ತಿದೆ ಎನ್ನುವುದು ಈ ರೀತಿಯ ಸಂಚಿನ ಯೋಚನೆಯಿಂದಲೇ ಗೊತ್ತಾಗುತ್ತದೆ. ಇದೆಲ್ಲವನ್ನು ಗಮನಿಸಿದಲ್ಲಿ ಭವಿಷ್ಯದ ರಾಜಕಾರಣದ ಚಿತ್ರಣ ಭೀಕರವಾಗಿರುವುದರಲ್ಲಿ ಅನುಮಾನವೇ ಇಲ್ಲ.

### ಸೋಮೇಶ್ವರ ತೇರಿನಮನೆಯ ಹತ್ತಿರ ಸ್ಥಾಪಿಸಲಾಗಿದ್ದ ಗಣೇಶ ಮೂರ್ತಿಗೆ ವಿದಾಯ

# ಭಕ್ತಿ ಭಾವದಿಂದ ಗಣೇಶನ ವಿಸರ್ಜನೆ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಅನೇಕ ಸಾರ್ವಜನಿಕ ಗಜಾನನೋತ್ಸವ ಸಮಿತಿಗಳು ಈ ಬಾರಿ ಸಾಂಪ್ರದಾಯಿಕವಾಗಿ ಹಾಗೂ ಅದ್ದೂರಿಯಾಗಿ ಗಣೇಶೋತ್ಸವವನ್ನು ಆಚರಿಸುತ್ತಿದ್ದು, ಗಣೇಶ ವಿಜರ್ಸನೆಯನ್ನು ಸಹ ಅಷ್ಟೇ ವಿಜ್ರಂಭಣೆಯಿಂದ ನೆರವೇರಿಸುತ್ತಿದ್ದು, ಹೊಸ ಹೊಸ ಸಾಂಸ್ಕೃತಿಕ ಕಲಾ ತಂಡಗಳನ್ನು ಕರೆಯಿಸುತ್ತಿರುವದು ಸಹ ಎಲ್ಲರ ಗಮನ ಸೆಳೆಯುತ್ತಿದೆ. ಪಟ್ಟಣದ ಸೋಮೇಶ್ವರ ತೇರಿನಮನೆಯ ಹತ್ತಿರ ಸ್ಥಾಪಿಸಲಾಗಿದ್ದ ಗಣೇಶ ಮೂರ್ತಿಯನ್ನು ಅದ್ದೂರಿಯಾಗಿ ಅನೇಕ ಕಲಾತಂಡಗಳ ಪ್ರದರ್ಶನಗಳ ಮೂಲಕ ವಿಸರ್ಜಿಸಲಾಯಿತು.

ಮೆರವಣಿಗೆಯಲ್ಲಿ ರಾಮನಭಕ್ತ ಹನುಮಂತನ ವೇಷಧಾರಿ ಬೃಹತ್ ವೇಷ ಧರಿಸಿ ಅವರೊಂದಿಗೆ ವಾನರ ವೇಷ ಧರಿಸಿದ್ದ ಕಲಾವಿದರು ರಾಮನಾಮ ಭಜನೆಗೆ ಹೆಜ್ಜೆ ಹಾಕಿದ್ದು ವಿಶೇಷವಾಗಿತ್ತು. ಮೆರವಣಿಗೆಯ ರಂಗು ಹೆಚ್ಚಿದಂತೆ ಅನೇಕರು ತಾವೂ ಅದರೊಂದಿಗೆ ನರ್ತಿಸಿದರು. ಸೂರಶೆಟ್ಟಿಕೊಪ್ಪದ ಜಗ್ಗಲಗಿ ಮೇಳದ ಜಗ್ಗಲಗಿ ಸದ್ದಿಗೆ ಯುವ ಪಡೆ ಅವರೊಂದಿಗೆ ಕುಣಿದು ಸಂಭ್ರಮಿಸಿದರು. ಸಾಗರ ತಾಲೂಕು ಗುಬ್ಬಿಯ ಶ್ರೀಕುಮಾರೇಶ್ವರ ಜಾನಪದ ಡೊಳ್ಳಿನ ತಂಡ, ವೀರಗಾಸೆ ಕುಣಿತ, ಯಕ್ಷಗಾನ ನೃತ್ಯ ಮೆರವಣಿಗೆಯ ರಂಗನ್ನು ಹೆಚ್ಚಿಸಿದ್ದವು. ಇಂತಹ ವಿಶೇಷ ತಂಡವನ್ನು ಕರೆಸುವ ಮೂಲಕ ಗಜಾನನೋತ್ಸವ ಸಮಿತಿಯವರು ಪಟ್ಟಣದ ಜನರ ಮೆಚ್ಚುಗೆಗೆ ಪಾತ್ರರಾದರು. ಇದರ ಜೊತೆ ಬೃಹತ್ ಗೊಂಬೆಗಳು ಮೆರವಣಿಗೆಗೆ ವಿಶೇಷ ಆಕರ್ಷಣೆ ನೀಡಿದವು.

ಗಣೇಶ ವಿಸರ್ಜನಾ ಮೆರವಣಿಗೆಗೆ ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ, ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ ಚಾಲನೆ ನೀಡಿದರು. ನಂತರ ಸೋಮೇಶ್ವರ ತೇರಿನ ಮನೆಯಿಂದ ಆರಂಭವಾದ ಭವ್ಯ ಮೆರವಣಿಗೆ ಬಳಿಗಾರ ಓಣಿ, ಪೇಟೆ ಹನುಮಂತದೇವರ ದೇವಸ್ಥಾನ, ಪುರಸಭೆ ಮೂಲಕ ಹಾಯ್ದು ಇಟ್ಟಿಗೆರೆ ಬಳಿ ನಿರ್ಮಿಸಲಾಗಿರುವ ತಾತ್ಕಾಲಿಕ ಹೊಂಡದಲ್ಲಿ ಗಣೇಶನ ವಿಸರ್ಜನೆಯನ್ನು ಸಂಪ್ರದಾಯಬದ್ಧವಾಗಿ ನಡೆಸಲಾಯಿತು.

ಈ ಸಂದರ್ಭದಲ್ಲಿ ಚನ್ನಪ್ಪ ಜಗಲಿ, ಶಿವಯೋಗಿ ಅಂಕಲಕೋಟಿ, ಬಸವೇಶ ಮಹಾಂತಶೆಟ್ಟರ, ವಿ.ಎಲ್. ಪೂಜಾರ, ಮಹಾದೇವಪ್ಪ ಅಣ್ಣಿಗೇರಿ, ನಿಂಗಪ್ಪ ಬನ್ನಿ, ಕುಬೇರಪ್ಪ ಮಹಾಂತಶೆಟ್ಟರ, ಚಂಬಣ್ಣ ಬಾಳಿಕಾಯಿ, ಗುರಣ್ಣ ಪಾಟೀಲಕುಲಕರ್ಣಿ, ಅಶೋಕಗೌಡ ಪಾಟೀಲ, ಸುರೇಶ ರಾಚನಾಯಕರ್, ಸಿದ್ದನಗೌಡ ಬಳ್ಳೊಳ್ಳಿ, ಶೇಕಪ್ಪ ಹುರಕಡ್ಲಿ, ವಿರುಪಾಕ್ಷ ಆದಿ, ಸುರೇಶ ಚೌಕನವರ, ಗಂಗಾಧರ ಉಮಚಗಿ, ರಾಮಣ್ಣ ಗೌರಿ, ಸಂತೋಷ ಜಾವೂರ ಸೇರಿದಂತೆ ಮತ್ತಿತರರು ಇದ್ದರು.



# ಬಿ ಗ್ರೇಡ್ ಕಲಾವಿದೆಯಾಗಿ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಯುವ ಸಂಗೀತ ಕಲಾವಿದೆ ಪ್ರಿಯಾಂಕಾ ಪ್ರವೀಣ ಹಾವೇರಿ ಇವರು ಧಾರವಾಡ ಆಕಾಶವಾಣಿ ಕೇಂದ್ರದ ಬಿ ಗ್ರೇಡ್ ಕಲಾವಿದೆಯಾಗಿ ಆಯ್ಕೆಯಾಗಿದ್ದಾರೆ.

ಲಕ್ಷ್ಮೇಶ್ವರದ ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಇತ್ತೀಚೆಗಷ್ಟೇ ಪದವಿ ಮುಗಿಸಿದ ಕಲಾವಿದೆ ಸದ್ಯ ಬೆಂಗಳೂರಿನ ಪ್ರತಿಷ್ಠಿತ ಸಂಸ್ಥೆಯಲ್ಲಿ ಉದ್ಯೋಗ ಮಾಡುತ್ತಿದ್ದಾಳೆ. ಸಂಗೀತ ಪದವಿ ಪಡೆದ ಪ್ರಿಯಾಂಕಾ ಸಂಗೀತ ಕ್ಷೇತ್ರದಲ್ಲಿ ಉತ್ತಮ ಸಾಧನೆಯೊಂದಿಗೆ ಈಗಾಗಲೇ ಅನೇಕ ಪ್ರತಿಷ್ಠಿತ ಕಾರ್ಯಕ್ರಮಗಳಲ್ಲಿ ಸಂಗೀತ ಸೇವೆ ನೀಡುವ ಮೂಲಕ ಅನೇಕ ಪ್ರಶಸ್ತಿಗಳನ್ನು ಪಡೆದಿದ್ದಾಳೆ.

5 ವರ್ಷಗಳ ಅವಧಿಗೆ ಕನ್ನಡ ಭಕ್ತಿಗೀತೆಗಳ ವಿಭಾಗದಲ್ಲಿ ಲಘು ಸಂಗೀತ ಸೇವೆಯನ್ನು ಗೌರವ ಧನದೊಂದಿಗೆ ನೀಡಲು ಆಕಾಶವಾಣಿ ಕಾರ್ಯಕ್ರಮಗಳ ಮುಖ್ಯಸ್ಥರಾದ ಎಸ್.ಎಸ್. ಕೋಲಿನ್ ಅನುಮೋದಿಸಿದ್ದಾರೆ.

# ಇಂದು ವಿದ್ಯುತ್ ನಿಲುಗಡೆ

■ ವಿಜಯಸಾಕ್ಷಿ ಸುದ್ದಿ, ಗದಗ

33/11 ಮುಶಿಗೇರಿ ವಿದ್ಯುತ್ ವಿತರಣಾ ಉಪಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಸೆಪ್ಟೆಂಬರ್ 20ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ವಿದ್ಯುತ್ ವಿತರಣಾ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುತ್ತಿರುವ ಸೂಡಿ, ದ್ಯಾಮುಣಸಿ, ಬೇವಿನಕಟ್ಟಿ, ಲಕ್ಕಲಕಟ್ಟಿ, ನಾಗೇಂದ್ರಗಡ, ರುದ್ರಾಪೂರ, ಅಮರಗಟ್ಟಿ, ಕಲ್ಲಿಗನೂರು, ಮುಶಿಗೇರಿ, ನೆಲ್ಲೂರು, ನೆಲ್ಲೂರು ಪ್ಯಾಟಿ, ಚಿಕ್ಕಾಳಗುಂಡಿ, ಹಿರೇಹಾಳಗುಂಡಿ, ಗುಳಗುಳಿ, ಯೆರೇಕುರುಬನಾಳ, ಇಟಗಿ, ಶಾಂತಗೇರಿ, ಸರ್ಜಾಪೂರ, ಬೊಮ್ಮಸಾಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

# ಫಲಾನುಭವಿಗಳಿಗೆ ಆದೇಶ ಪ್ರತಿ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಮಟ್ಟದ ಜನತಾ ದರ್ಶನದಲ್ಲಿ ವಿವಿಧ ಸಮಾಜಿಕ ಭದ್ರತಾ ಯೋಜನೆಯಲ್ಲಿ ಫಲಾನುಭವಿಗಳಾದ ಕಣಗಿಹಾಳ ಗ್ರಾಮದ ಶರಣವ್ವ ಪೂಜಾರ, ಲಕ್ಕುಂಡಿ ಗ್ರಾಮದ ಈರವ್ವ ವಡ್ಡರ, ಲಕ್ಕುಂಡಿ ಗ್ರಾಮದ ನಿರ್ಮಲ ಕೊಪ್ಪಳ, ಲಿಂಗದಾಳ ಗ್ರಾಮದ ರಾಚಯ್ಯ ಚೌಕಿಮಠ, ಕೋಟುಮುಚಗಿ ಗ್ರಾಮದ ಭೀಮವ್ವ ಜಂತಲಿ, ಮಮತಾ ನದಾಫ, ಕುರ್ತಕೋಟಿ ಗ್ರಾಮದ ಬೂದವ್ವ ಚುಂಗಿನ, ಅಸುಂಡಿ ಗ್ರಾಮದ ಯಲ್ಲವ್ವ ಆರೇರ, ಅಂತೂರ ಬೆಂತರು ಗ್ರಾಮದ ಸುಮಾ ಪೂಜಾರ, ಶಂಕ್ರಪ್ಪ ಇಳಕಳ್, ಲಕ್ಕುಂಡಿ ಗ್ರಾಮದ ಮಂಜುನಾಥ ತೊಳಸಿ, ಭರಮವ್ವ ಹಮ್ಮಿಗಿ, ಅಶ್ವಿನಿ ತಳವಾರ ಅವರುಗಳಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಆದೇಶ ಪ್ರತಿ ವಿತರಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಮತ್ತು ರೋಣ ಶಾಸಕ ಜಿ.ಎಸ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಸಿಇಒ ಭರತ್ ಎಸ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ ಹಾಜರಿದ್ದರು.

### ಹುಣ್ಣಿಮೆಯ ಜನ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಕಾಡುವ ಶಕ್ತಿಗಿಂತ ಕಾಪಾಡುವ ಶಕ್ತಿ ದೊಡ್ಡದು

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಜಗದ ಜನರ ಬದುಕಿನಲ್ಲಿ ಬರುವ ಸಂಕಷ್ಟಗಳು ಮತ್ತು ಸಮಸ್ಯೆಗಳು ಹಲವಾರು. ಅನೇಕ ಸಮಸ್ಯೆಗಳಿಗೆ ಇವತ್ತಿಗೂ ಉತ್ತರ ಸಿಕ್ಕಿಲ್ಲ. ಆದರೆ ಜಗತ್ತು ಬೆಳೆಯುವುದು ನಿಂತಿಲ್ಲ. ಆದ್ದರಿಂದ ಕಾಡುವ ಶಕ್ತಿಗಿಂತ ಕಾಪಾಡುವ ಶಕ್ತಿ ಬಲು ದೊಡ್ಡದೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಹುಣ್ಣಿಮೆಯ ಜನ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಒಂದು ಕೆಲಸ ಕೈಗೆತ್ತಿಕೊಂಡಾಗ ಅದಕ್ಕೆ ಅಡೆತಡೆಗಳೆದುರಾದಾಗ ಮಾಡುವ ಪ್ರಯತ್ನವನ್ನು ನಿಲ್ಲಿಸಬಾರದು. ನೀರಿಗಿಳಿದ ಮೇಲೆ ಚಳಿಯಾಗಲಿ, ಮಳೆಯಾಗಲಿ ಲೆಕ್ಕಿಸದೇ ಹೆಜ್ಜೆ ಹಾಕಿದರೆ ಪ್ರತಿಫಲ ತಾನಾಗಿಯೇ ಹುಡುಕಿಕೊಂಡು ಬರುತ್ತದೆ. ಸೋತೆ ಎಂದು ಹಿಂಜರಿಯದೇ ಮುಂದಿಟ್ಟ ಹೆಜ್ಜೆ ಹಿಂದಿಡಬಾರದು. ಮುಂದಿಟ್ಟ ಆ ಹೆಜ್ಜೆ ನಿನ್ನ ಜೀವನದ ಇತಿಹಾಸವನ್ನೇ ಸೃಷ್ಟಿಸುವ ಹೆಜ್ಜೆ ಯಾಕಾಗಿರಬಾರದು? ತಾಳ್ಮೆ ಮತ್ತು ಮೌನ ಅತ್ಯದ್ಭುತ ಆಯುಧಗಳು. ತಾಳ್ಮೆ ಮಾನಸಿಕವಾಗಿ ಗಟ್ಟಿಗೊಳಿಸಿದರೆ ಮೌನ ಭಾವನಾತ್ಮಕವಾಗಿ ಗಟ್ಟಿಗೊಳಿಸುತ್ತದೆ. ಒಂದು ಹೂವು ಇನ್ನೊಂದು ಹೂವಿನೊಂದಿಗೆ ಸ್ಪರ್ಧೆಗಿಳಿಯುವುದಿಲ್ಲ. ಸುಂದರವಾಗಿ ಅರಳುವುದಷ್ಟೇ ಅವುಗಳ ಕೆಲಸ. ಹಾಗೆಯೇ ನಮ್ಮ ವ್ಯಕ್ತಿತ್ವವು ಹೂವಿನಂತಾದರೆ ಬದುಕು ಸಾರ್ಥಕ. ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನದ ಅನಂತ ಜ್ವಲಂತ ಸಮಸ್ಯೆಗಳಿಗೆ ಆಧ್ಯಾತ್ಮದ ಜ್ಞಾನವನ್ನು ಬೋಧಿಸುವುದರ ಮೂಲಕ ಜನ ಸಮುದಾಯದ ಬದುಕಿಗೆ ಬೆಳಕು ತೋರಿದ್ದಾರೆ ಎಂದರು.



ನೇತೃತ್ವ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನುಷ್ಯ ಖಾಲಿ ಕೈಯಲ್ಲಿ ಬರುತ್ತಾನೆ. ಖಾಲಿ ಕೈಯಲ್ಲಿ ಹೋಗುತ್ತಾರೆ ಎಂದು ಬಹಳಷ್ಟು ಜನರು ತಿಳಿದಿರುತ್ತಾರೆ. ಆದರೆ ಮನುಷ್ಯ ಬರುವಾಗ ಭಾಗ್ಯದ ಜೊತೆ ಬರುತ್ತಾನೆ. ಹೋಗುವಾಗ ಕರ್ಮದ ಫಲದೊಂದಿಗೆ ಹೋಗುತ್ತಾನೆ. ಪ್ರೀತಿ ಮತ್ತು ಸಹಾನುಭೂತಿ ತುಂಬಿದ ಹೃದಯ ಆಂತರಿಕ ಶಕ್ತಿ ಇಚ್ಛಾಶಕ್ತಿ ಜೀವನದ ಸಂತೋಷ ನೆಮ್ಮದಿಗೆ ಮುಖ್ಯವೆಂಬುದನ್ನು ಯಾರೂ ಮರೆಯಬಾರದೆಂದರು.

ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು, ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು, ಮಲಘಾಣ ಹಿರೇಮಠದ ರೇಣುಕ ಶಿವಾಚಾರ್ಯ ಸ್ವಾಮಿಗಳು, ಅ.ಭಾ.ವೀ.ಮಹಾಸಭಾ ಚಿಕ್ಕಮಗಳೂರು ಜಿಲ್ಲಾ ಘಟಕದ ಅಧ್ಯಕ್ಷ ಹೆಚ್.ಎಂ. ಲೋಕೇಶ, ದಾವಣಗೆರೆ ವೀರೇಶ ದಂಪತಿಗಳು, ಕಡೂರು ತಾಲೂಕಿನ ಹಾಲುಮತ ಸಮಾಜದ ಅನೇಕ ಪ್ರಮುಖರು ಉಪಸ್ಥಿತರಿದ್ದರು. ಈ ಪವಿತ್ರ ಧರ್ಮ ಸಮಾರಂಭದಲ್ಲಿ ಶ್ರೀ ಪೀಠದ ಲೆಕ್ಕಾಧಿಕಾರಿ ಸಂಕಪ್ಪನವರ, ಚಂದ್ರಶೇಖರ, ರೇಣುಕಸ್ವಾಮಿ, ರವಿ ಹಿರೇಮಠ, ಪ್ರಭುಸ್ವಾಮಿ ಮಠದ, ಗುರುಕುಲದ ಕುಲಪತಿ ಸಿದ್ಧಲಿಂಗಯ್ಯ ಶಾಸ್ತ್ರಿಗಳು ಹಿರೇಮಠ ಮತ್ತು ಗುರುಕುಲ ಸಾಧಕರು ಇದ್ದರು. ಇದೇ ಸಂದರ್ಭದಲ್ಲಿ 'ರಂಭಾಪುರಿ ಬೆಳಗು' ಸೆಪ್ಟಂಬರ್ ಸಂಚಿಕೆಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆ ಮಾಡಿದರು.

ಪ್ರಾತಃಕಾಲ ಶ್ರೀ ಜಗದ್ಗುರು ರಂಭಾಪುರಿ ಪೀಠದ ಎಲ್ಲ ದೈವಗಳಿಗೆ ಹುಣ್ಣಿಮೆಯ ನಿಮಿತ್ತ ವಿಶೇಷ ಹೂವಿನ ಅಲಂಕಾರ, ಪೂಜೆಗಳು ಜರುಗಿದವು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು.

# ರಸ್ತೆ ಸರಿಪಡಿಸಲು ಕೆಎಸ್‌ಆರ್‌ಟಿಸಿ ಸಿಬ್ಬಂದಿಗಳ ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ಬಹುತೇಕ ರಸ್ತೆಗಳು ಸಂಪೂರ್ಣ ಹಾಳಾಗಿದ್ದು, ರಸ್ತೆ ದುರಸ್ಥಿಗೆ ಆಗ್ರಹಿಸಿ ಸಾರ್ವಜನಿಕರು, ಸಂಘಟನೆಯವರು ಹೋರಾಟ ನಡೆಸಿ ಮನವಿ ಸಲ್ಲಿಸಿದ್ದಾಗಿದೆ. ಇದೀಗ, ಹಾಳಾದ ರಸ್ತೆಯಲ್ಲಿ ವಾಹನ ಚಲಾಯಿಸುವ ಕೆಎಸ್‌ಆರ್‌ಟಿಸಿಯ ಅಧಿಕಾರಿಗಳು, ಸಿಬ್ಬಂದಿ, ಚಾಲಕ-ನಿರ್ವಾಹಕರೂ ಸಹ ರಸ್ತೆ ದುರಸ್ಥಿಗಾಗಿ ತಮ್ಮ ಮನವಿಯನ್ನು ಬುಧವಾರ ಶಾಸಕ ಡಾ. ಚಂದ್ರು ಲಮಾಣಿ ಅವರಿಗೆ ಸಲ್ಲಿಸಿದರು.

ಮನವಿಯಲ್ಲಿ ಲಕ್ಷ್ಮೇಶ್ವರ ಘಟಕದ ವ್ಯಾಪ್ತಿಗೆ ಬರುವ ಬಹುತೇಕ ರಸ್ತೆಯಲ್ಲಿ ದೊಡ್ಡ ಪ್ರಮಾಣದ ತಗ್ಗು ಗುಂಡಿಗಳುಂಟಾಗಿ ರಸ್ತೆ ಸಂಪೂರ್ಣ ಹದಗೆಟ್ಟು ಹೋಗಿದ್ದು, ಈ ರಸ್ತೆಯಲ್ಲಿ ನಿತ್ಯ ವಾಹನ ಚಲಾಯಿಸುವುದು ಹರಸಾಹಸವೇ ಆಗಿದೆ. ಚಾಲಕರು ಅನಾರೋಗ್ಯಕ್ಕೊಳಗಾಗುತ್ತಿದ್ದು ಪ್ರಯಾಣಿಕರೂ ಸಮಸ್ಯೆಗೊಳಗಾಗುತ್ತಿದ್ದಾರೆ. ಬಸ್ಸುಗಳು ರಸ್ತೆ ಮಾರ್ಗದಲ್ಲಿಯೇ ಕೆಟ್ಟು ನಿಲ್ಲುವಂತಾಗಿವೆ. ಸರಿಯಾದ ಸಮಯಕ್ಕೆ ಮಾರ್ಗ ತಲುಪಲಾಗುತ್ತಿಲ್ಲ, ಇದರಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಪ್ರಯಾಣಿಕರಿಗೆ ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಹದಗೆಟ್ಟ ರಸ್ತೆಗಳನ್ನು ವಾರದೊಳಗಾಗಿ ದುರಸ್ಥಿಗೊಳಿಸುವಂತೆ ಮನವಿ ಸಲ್ಲಿಸಿದರು.

ಶಾಸಕ ಡಾ, ಚಂದ್ರು ಲಮಾಣಿ ಮನವಿ ಸ್ವೀಕರಿಸಿ, ರಸ್ತೆಗಳ ಸ್ಥಿತಿ-ಗತಿಗಳ ಬಗ್ಗೆ ತಮಗೆ ಸಂಪೂರ್ಣ ಅರಿವಿದೆ. ಕ್ಷೇತ್ರ ವ್ಯಾಪ್ತಿಯಲ್ಲಿನ ರಸ್ತೆಗಳ ಸುಧಾರಣೆಗೆ ಅನೇಕ ಬಾರಿ ಸರಕಾರದ ಗಮನ ಸೆಳೆದಿದ್ದೇನೆ. ಸರಕಾರಿಂದ ಯಾವುದೇ ರೀತಿಯ ಅನುದಾನ ಬಿಡುಗಡೆಯಾಗುತ್ತಿಲ್ಲ. ಗುಂಡಿ ಮುಚ್ಚಲಾದರೂ ಅನುದಾನ ಕಲ್ಪಿಸಲು ಕೋರಿದ್ದೇನೆ. ಯಾವುದೇ ಕಾರಣಕ್ಕೂ ಮಾರ್ಗದ ಬಸ್ಸುಗಳನ್ನು ನಿಲ್ಲಿಸದಂತೆ ಸೂಚಿಸಿದರು.

ಈ ವೇಳೆ ಘಟಕ ವ್ಯವಸ್ಥಾಪಕಿ ಸವಿತಾ ಆದಿ, ಶೋಭಾ ಪಾಟೀಲ, ಬೊಮ್ಮನಕಟ್ಟಿ, ಡಿ.ಎಸ್. ಹಿರೇಮಠ, ಫಕ್ಕೀರಯ್ಯ ನರಗುಂದಮಠ, ಅಂಬರೀಶ ಗುಡಗುಂಟಿ, ಹನುಮಂತ ಮ್ಯಾಟಣ್ಣವರ, ರಮೇಶ ಕೆರೆಕೊಪ್ಪ, ಡಿ.ಎಚ್. ಸೊರಟೂರ, ಬಸವರಾಜ ಕಿತ್ಲಿ, ಬಸ್ ಡಿಪೋ ಘಟಕದ ಚಾಲಕರು ನಿರ್ವಾಹಕರು, ಸಿಬ್ಬಂದಿಗಳು ಇದ್ದರು.

# 'ನರೇಗಾ' ಗ್ರಾಮೀಣ ಜನರಿಗೆ ವರದಾನ

■ ವಿಜಯಸಾಕ್ಷಿ ಸುದ್ದಿ, ರೋಣ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯು ಗ್ರಾಮೀಣ ಜನರಿಗೆ ವರದಾನವಾಗಿದೆ. ಅವುಗಳಲ್ಲಿ ಮುಖ್ಯವಾಗಿ ವೈಯಕ್ತಿಕ ಕಾಮಗಾರಿಗಳು ನಿಮ್ಮ ಆರ್ಥಿಕ ಗುಣಮಟ್ಟವನ್ನು ಸುಧಾರಿಸಲು ನೆರವಾಗುತ್ತವೆ ಎಂದು ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ (ಗ್ರಾ.ಉ) ಚಂದ್ರಶೇಖರ ಬಿ.ಕಂದಕೂರ ಹೇಳಿದರು.



ರೋಣ ತಾಲೂಕಿನ ಸವಡಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಹಮ್ಮಿಕೊಂಡಿದ್ದ ವೈಯಕ್ತಿಕ ಕಾಮಗಾರಿ ಅಭಿಯಾನದಲ್ಲಿ ಮಾತನಾಡಿದ ಅವರು, ಮಹಾತ್ಮಾ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ 100 ದಿನಗಳವರೆಗೆ ಪ್ರತಿ ಉದ್ಯೋಗ ಚೀಟಿಗೆ ಕೆಲಸ ನೀಡುತ್ತೇವೆ. ಗಂಡು-ಹೆಣ್ಣು ಸಮಾನವಾಗಿ 349 ದಿನವೊಂದಕ್ಕೆ ಯೋಜನೆಯಡಿ ಕೂಲಿ ಮೊತ್ತ ನೀಡಲಾಗುತ್ತದೆ. ಅಂದರೆ ಒಂದು ಕುಟುಂಬವು ವಾರ್ಷಿಕವಾಗಿ 34800 ರೂ ಪಡೆಯುತ್ತದೆ. ಈ ಹಿನ್ನೆಲೆ ಎಲ್ಲರೂ ಕೆಲಸವನ್ನು ಕೇಳಿ ಪಡೆಯಿರಿ ಎಂದರು.

ನಿಮಗೆ ಕೆಲಸ ಬೇಕಾದರೆ ನಮೂನೆ 6ರಲ್ಲಿ ನಿಮ್ಮ ಹೆಸರು ಹಾಗೂ ಉದ್ಯೋಗ ಚೀಟಿಯ ಸಂಖ್ಯೆಯನ್ನು ನಮೂದಿಸಿ ಗ್ರಾಮ ಪಂಚಾಯಿತಿಗೆ ಸಲ್ಲಿಸಿ. ಶೀಘ್ರವಾಗಿ ನಿಮಗೆ ಗ್ರಾಮ ಪಂಚಾಯಿತಿಯಿಂದ ಉದ್ಯೋಗ ಲಭ್ಯವಾಗುತ್ತದೆ ಎಂದರು.

ಇನ್ನು ನರೇಗಾ ಯೋಜನೆಯಡಿ ವೈಯಕ್ತಿಕ ಕಾಮಗಾರಿ ಅಡಿಯಲ್ಲಿ ಹಲವಾರು ಕೆಲಸಗಳು ಸಿಗುತ್ತವೆ. ಅದರಲ್ಲಿ ಮುಖ್ಯವಾಗಿ ಬಚ್ಚಲು ಗುಂಡಿ, ದನದ ಕೊಟ್ಟಿಗೆ, ಕೋಳಿ ಶೆಡ್, ಕೃಷಿ ಹೊಂಡ ಕಾಮಗಾರಿ ಮಾಡಿಕೊಳ್ಳಬಹುದು. ತೋಟಗಾರಿಕೆ ಬೆಳೆಗಳಾದ ತೆಂಗು, ಮಾವು, ದಾಳಿಂಬೆ, ಸೀಬೆ, ಗುಲಾಬಿ, ಮಲ್ಲಿಗೆ, ಬಾಳೆ ಮತ್ತು ಪಪ್ಪಾಯಿ ಸೇರಿದಂತೆ ವಿವಿಧ ಬೆಳೆಗಳಿಗೆ ಆರ್ಥಿಕ ನೆರವು ಪಡೆದು ಬೆಳೆದುಕೊಳ್ಳಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾ.ಪಂ ಸಿಬ್ಬಂದಿಗಳು, ಗ್ರಾ.ಪಂ ಸಿಬ್ಬಂದಿಗಳು ಸೇರಿದಂತೆ ಗ್ರಾಮಸ್ಥರು, ಕೂಲಿಕಾರರು ಹಾಜರಿದ್ದರು.

ತಾಲೂಕು ಮಟ್ಟದ ದಸರಾ ಕ್ರೀಡಾಕೂಟದ ಧ್ವಜಾರೋಹಣ ನೆರವೇರಿಸಿದ ವಿ.ಪ ಸದಸ್ಯ ಎಸ್.ವಿ. ಸಂಕನೂರು

# ಮನುಷ್ಯನಿಗೆ ಆರೋಗ್ಯ ಸಂಪತ್ತು ಮುಖ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಯುವಕರು ಕ್ರೀಡೆಯಲ್ಲಿ ಪಾಲ್ಗೊಂಡು ದೈಹಿಕ ಮತ್ತು ಮಾನಸಿಕ ಸಂಪತ್ತನ್ನು ಗಳಿಸಿದಾಗ ಮಾತ್ರ ಬಲಿಷ್ಠ ರಾಷ್ಟ್ರ ನಿರ್ಮಾಣ ಸಾಧ್ಯ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಅಭಿಪ್ರಾಯಪಟ್ಟರು.

ನಗರದ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ತಾಲೂಕು ಪಂಚಾಯತ, ಶಾಲಾ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಯುವ ಸಂಘಗಳ ಒಕ್ಕೂಟ ಇವರುಗಳ ಸಹಯೋಗದಲ್ಲಿ ಏರ್ಪಡಿಸಿದ ಗದಗ ತಾಲೂಕು ಮಟ್ಟದ ದಸರಾ ಕ್ರೀಡಾಕೂಟದ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಮಕ್ಕಳು ಕ್ರೀಡೆಯಲ್ಲಿ ಆಸಕ್ತಿ ಹೊಂದುವುದರಿಂದ ಮಾನಸಿಕ ಮತ್ತು ದೈಹಿಕವಾಗಿ ಸದೃಢರಾಗುತ್ತಾರೆ. ಮನುಷ್ಯನಿಗೆ ಆರೋಗ್ಯ ಸಂಪತ್ತು ಬಹಳ ಮುಖ್ಯ. ಪ್ರತಿಯೊಬ್ಬರೂ ಪ್ರತಿ ದಿನ ಯಾವುದಾದರೂ ಒಂದು ದೈಹಿಕ ವ್ಯಾಯಮದಲ್ಲಿ ಪಾಲ್ಗೊಳಬೇಕು. ನಮ್ಮ ದೇಶದ ಹೆಮ್ಮೆಯಾದ ಯೋಗವು ಇಂದು ಜಾಗತಿಕ ಮಟ್ಟದಲ್ಲಿ ಎಲ್ಲರ ಗಮನ ಸೆಳೆದು ಜೂನ್ 21ರಂದು ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನಾಗಿ ಆಚರಿಸಿ ಯೋಗದ ಮಹತ್ವವನ್ನು ಪ್ರಚುರಪಡಿಸಲಾಗುತ್ತಿದೆ ಎಂದರು.

ಸರ್ಕಾರ ಕ್ರೀಡೆಗೆ ಮಹತ್ವ ನೀಡಿ ದಸರಾ ಕ್ರೀಡಾಕೂಟವನ್ನು ಆಯೋಜಿಸಿದೆ. ಗೆಲುವು-ಸೋಲಿನ ಬಗ್ಗೆ ಯೋಚನೆ ಮಾಡದೆ ಭಾಗವಹಿಸುವಿಕೆಗೆ ಮಹತ್ವ ನೀಡಿ ಸೋಲು-ಗೆಲವನ್ನು ಕ್ರೀಡಾ ಮನೋಭಾವದಿಂದ ಸಮಾನವಾಗಿ ತೆಗೆದುಕೊಳ್ಳಬೇಕು. ಪ್ರತಿಯೊಬ್ಬರೂ ಶಿಸ್ತಿನಿಂದ ಕ್ರೀಡೆಯಲ್ಲಿ ಪಾಲ್ಗೊಳ್ಳಬೇಕು. ನಮ್ಮ ಜಿಲ್ಲೆಯ ಕ್ರೀಡಾಪಟುಗಳು ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಪಾಲ್ಗೊಂಡು ಜಿಲ್ಲೆಗೆ ಕೀರ್ತಿಯನ್ನು ತರಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಬಸವರಾಜ ಕಡೇಮನಿ, ಕೆ.ಎಸ್. ಪಲ್ಲೇದ, ವಾಯ್.ಕೆ. ಚೌಡಾಪುರ, ರಾಜು ಚವ್ಹಾಣ, ದೈಹಿಕ ಶಿಕ್ಷಕರು, ಶಾಲಾ ಮಕ್ಕಳು ಹಾಜರಿದ್ದರು.





ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ತಾಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಉತ್ಸಾಹದಿಂದ ಪಾಲ್ಗೊಂಡ ಮಕ್ಕಳು, ತಾಲೂಕು ಮಟ್ಟದಲ್ಲಿ ವಿಜಯ ಸಾಧಿಸಿ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ, ಮುಕ್ತವಾಗಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಗೊಂಡು ಜಿಲ್ಲೆಗೆ ಕಿರ್ತಿಯನ್ನು ತರಬೇಕು ಎಂದು ನುಡಿದರು.

ಕಾರ್ಯಕ್ರಮದಲ್ಲಿ ಶೋಭಾ ಮತ್ತು ತಂಡದವರು ಗೀತೆ ಪ್ರಸ್ತುತಪಡಿಸಿದರು. ಕಾರ್ಯಕ್ರಮವನ್ನು ಎಂ.ಎಸ್. ಕುಚಬಾಳ ನಿರ್ವಹಿಸಿದರು. ಎಫ್.ಎಂ. ಮುಶೇಣ್ಣನವರ ವಂದಿಸಿದರು.

# ಡಾ. ಪಂ. ಪುಟ್ಟರಾಜರ ಪುಣ್ಯಸ್ಮರಣೋತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದ ಬಸ್ ನಿಲ್ದಾಣದ ಪಕ್ಕದಲ್ಲಿರುವ ಲಿಂ. ಡಾ. ಪಂ. ಪುಟ್ಟರಾಜ ಗವಾಯಿಯವರ ಪುತ್ಥಳಿಗೆ ಮಂಗಳವಾರ ಸ್ಥಳೀಯ ಕರವೇ ಗ್ರಾಮ ಘಟಕ ಮತ್ತು ಪುಟ್ಟರಾಜ ಗವಾಯಿಗಳವರ ಸೇವಾ ಸಮಿತಿ ಇವರ ಸಂಯುಕ್ತ ಆಶ್ರಯದಲ್ಲಿ ಪಂ. ಪುಟ್ಟರಾಜ ಗವಾಯಿಗಳವರ 14ನೇ ವರ್ಷದ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ ಜರುಗಿತು.



ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ ಪುಟ್ಟರಾಜರ ಮೂರ್ತಿಗೆ ವೇ.ಮೂ. ಗುರುಲಿಂಗಯ್ಯ ಮಂಟಯ್ಯನಮಠ ಸ್ವಾಮಿಗಳಿಂದ ಮಹಾ ರುದ್ರಾಭಿಷೇಕ, ವಿಶೇಷ ಪೂಜಾ ಕೈಂಕರ್ಯಗಳು ಜರುಗಿದವು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ವಹಿಸಿದ್ದ ಸಿದ್ದನಕೊಳ್ಳದ ಡಾ. ಶಿವಕುಮಾರ ಸ್ವಾಮೀಜಿಯವರು ಆಶೀರ್ವಚನ ನೀಡಿದರು.

ಈ ವೇಳೆ ಸಿದ್ದನಕೊಳ್ಳದ ಶಿವಕುಮಾರ ಸ್ವಾಮೀಜಿಯವರನ್ನು, ಕಪ್ಪತಗಿರಿ ಫೌಂಡೇಷನ್ ವತಿಯಿಂದ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಶೆಟ್ಟೆಪ್ಪ ಬಂಡಿವಡ್ಡರ ಹಾಗೂ ದಸರಾ ಕುಸ್ತಿಪಟು ಬಸವರಾಜ ಹಡಪದ ಅವರನ್ನು ಸಮಿತಿ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಉಮೇಶ ಮೇಟಿ, ಮಲ್ಲಿಕಾರ್ಜುನ ಮುಧೋಳ, ವೀರಪ್ಪ ತಳವಾರ, ಪುಂಡಪ್ಪ ಮಡಿವಾಳರ, ಚನ್ನಬಸಪ್ಪ ಸೂಡಿ, ಬಸವರಾಜ ಶಿವಶಿಂಪರ, ಪ್ರಮೋದ ಯಾವಗಲ್ಲ, ರವಿ ಮುಗಳಿ, ಹನಮಂತ ಭಜಂತ್ರಿ, ನಾಗರಾಜ ಸಂಗನಬಶೆಟ್ಟರ, ಕಳಕಪ್ಪ ಬಂಡಿ, ಈರಣ್ಣ ಬುಳ್ಳಾ, ಮಂಜುನಾಥ ಜಂಗಣ್ಣವರ, ದ್ಯಾಮಣ್ಣ ಜಂಗಣ್ಣವರ, ಬಸವರಾಜ ರಂಗಣ್ಣವರ ಸೇರಿದಂತೆ ಗ್ರಾಮದ ಪುಟ್ಟರಾಜ ಸದ್ಭಕ್ತ ವೃಂದದವರು ಇದ್ದರು.

ಪ್ರಕಾಶ ವಾಲಿ ಸ್ವಾಗತಿಸಿದರು, ಮುತ್ತಣ್ಣ ಎಂ.ಮೇಟಿ ನಿರೂಪಿಸಿದರು.

# ಶಿವಯೋಗಿಯ ನೆನೆದರೆ ಮುಕ್ತಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದಲ್ಲಿ ಕುಮಾರೇಶ್ವರ ಕೃಪಾ ಪೋಷಿತ ಪಂ. ಪಂಚಾಕ್ಷರ ಗವಾಯಿಗಳ ನಾಟ್ಯ ಸಂಘದಿಂದ ಧಾರವಾಡದ ಡಾ. ರಾಜಶೇಖರ ಎಸ್.ಬಸೆಟ್ಟಿ ವಿರಚಿತ 'ವೈರಾಗ್ಯನಿಧಿ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಮಹಾತ್ಮೆ' ಎಂಬ ಭಕ್ತಿ ಪ್ರಧಾನ ನಾಟಕದ ಪ್ರಾರಂಭೋತ್ಸವ ಮಂಗಳವಾರ ನಡೆಯಿತು.



ನಾಟಕ ಉದ್ಘಾಟಿಸಿದ ಬಸವ ಬೆಳವಿಯ ಶರಣಬಸವ ದೇವರು ಮಾತನಾಡಿ, ಮಹಾತ್ಮರೆಂದರೆ ದೊಡ್ಡವರು. ಅವರು ತಮ್ಮ ಪವಾಡಗಳಿಂದಲೇ ದೊಡ್ಡವರಾದವರು. ಈ ಭಾಗದಲ್ಲಿ ಬಾಳಿ ಬದುಕಿದ ಮಹಾಂತ ಶಿವಯೋಗಿ ತನ್ನ ಪವಾಡಗಳಿಂದಲೇ ಶಿಶಿನಾಳ ಶರೀಫ, ನವಲಗುಂದ ನಾಗಲಿಂಗರು ಇಲ್ಲಿ ಹಾದು ಹೋಗುವ ಸಂದರ್ಭದಲ್ಲಿ ಹೆದರುತ್ತಿದ್ದರು. ಇತಿಹಾಸದಲ್ಲಿ ಇಂತಹ ಕವಿಗಳು ಇನ್ನೊಬ್ಬರಿಲ್ಲ. ಶಿವಯೋಗಿ ನೆನೆದರೆ ಮುಕ್ತಿ ಸಿಗುತ್ತದೆ. ಇಂತವರ ನಾಟಕ ನೋಡುವದು ನಮ್ಮ ಭಾಗ್ಯ ಎಂದರು.

ನಾಟಕದ ಕರ್ತೃ ಡಾ. ರಾಜಶೇಖರ ಎಸ್.ಬಸೆಟ್ಟಿ ಮಾತನಾಡಿ, ಈ ನಾಟಕವನ್ನು ರಂಗಭೂಮಿಗೆ ತಂದದ್ದು ಸುವರ್ಣಾಕ್ಷರಗಳಲ್ಲಿ ಬರೆದಿಡುವ ಸಂಗತಿಯಾಗಿದೆ. ಈ ನಾಟಕವನ್ನು ಈ ಕಂಪನಿಗಾಗಿಯೇ ಬರೆದಿದ್ದೇನೆ. ಕಲೆ, ರಂಗಭೂಮಿ ಉಳಿಯಬೇಕಿದೆ. ಈ ಕೆಟ್ಟು ಹೋದ ಸಂಪ್ರದಾಯಗಳಿಂದ ಕಲೆ ಉಳಿಯಬೇಕು, ಬೆಳೆಯಬೇಕು ಎಂದರು.

ಈ ಸಂದರ್ಭದಲ್ಲಿ ನೀಲಗುಂದ ಗುದ್ನೇಶ್ವರ ಮಠದ ಪ್ರಭುಲಿಂಗದೇವರು, ಪಟ್ಟಣದ ಗಣ್ಯರಾದ ಎಂ.ಡಿ. ಬಟ್ಟೂರ, ಬಿ.ಕೆ. ಹರಪನಹಳ್ಳಿ, ಆರ್.ಸಿ. ಕಮಾಜಿ, ಎಸ್.ಎಂ. ನೀಲಗುಂದ, ಪಿ.ಎ. ವಂಟಕರ, ಡಾ. ಎಸ್.ಸಿ. ಚವಡಿ, ಅಶೋಕ ಸೊನಗೋಜಿ, ಬಸವರಾಜ ಸುಂಕಾಪೂರ, ಬಸವರಾಜ ಬಾತಾಖಾನಿ, ಪಿ.ಎಸ್. ಮರಿದೇವರಮಠ ಇದ್ದರು. ಎಸ್.ಎಂ. ಉಜ್ಜಣ್ಣವರ ನಿರೂಪಿಸಿದರು.

# ವಿಘ್ನ ನಿವಾರಕನಿಗೆ ಭಕ್ತಿಯ ವಿದಾಯ



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ಶ್ರೀ ಸಾರ್ವಜನಿಕ ಗಜಾನನ ಉತ್ಸವ ಮಂಡಳಿಯಿಂದ 2024ನೇ ಸಾಲಿನ 49ನೇ ಗಣೇಶೋತ್ಸವ ವಿಜೃಂಭಣೆಯಿಂದ ಜುರಗಿ, ನೂರಾರು ಭಕ್ತರನ್ನೊಳಗೊಂಡಂತೆ ವಾದ್ಯ ಮೇಳದೊಂದಿಗೆ ಅದ್ದೂರಿಯಾಗಿ ಭಕ್ತಿಯ ವಿದಾಯ ಹೇಳಲಾಯಿತು.

ಗಜಾನನ ಮಂಡಳಿಯಲ್ಲಿ 10 ದಿನಗಳಿಂದ 'ಯಾತಾಳ ಚನ್ನಬಸಪ್ಪಜ್ಜ' ದೃಶ್ಯಾವಳಿಗಳನ್ನು ಸಾವಿರಾರು ಸಂಖ್ಯೆಯಲ್ಲಿ ಅವಳಿ ನಗರದ ಜನತೆಯಲ್ಲದೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಜನರು ವೀಕ್ಷಿಸಿದರು. ಗಜಾನನ ಮಂಡಳಿಯಲ್ಲಿ ಮಂಡಳಿಯ ಕಾರ್ಯಕರ್ತರಿಗೆ ಸನ್ಮಾನ, ಫಲ-ಪುಷ್ಪಗಳ ಲಿಲಾವು ಜರುಗಿತು.

ಪ್ರತಿವರ್ಷದಂತೆ ಈ ವರ್ಷವೂ ಗಣೇಶೋತ್ಸವಕ್ಕೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಹಾಯ-ಸಹಕಾರ ನೀಡಿದ ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ, ವಿದ್ಯುತ್ ಇಲಾಖೆಯ ಸಿಬ್ಬಂದಿಗಳಿಗೆ, ನಗರಸಭೆಯ ಪೌರಕಾರ್ಮಿಕರಿಗೆ, ಗೃಹರಕ್ಷಕ ದಳದ ಸಿಬ್ಬಂದಿಗಳಿಗೆ, ಓಣಿಯ ಗುರು-ಹಿರಿಯರಿಗೆ, ಸಂಘದ ಕಾರ್ಯಕರ್ತರಿಗೆ, ಪದಾಧಿಕಾರಿಗಳಿಗೆ ಹಾಗೂ ಅವಳಿ ನಗರದ ಎಲ್ಲ ಜನತೆಗೂ ಸಂಘದ ಅಧ್ಯಕ್ಷ ಉದಯ ವರ್ಣೇಕರ್ ಧನ್ಯವಾದಗಳನ್ನು ತಿಳಿಸಿದರು.

# ಶಿಕ್ಷಣ ವ್ಯವಸ್ಥೆ ಪರಿವರ್ತನೆಯಾಗಬೇಕಿದೆ

▶▶ಮೊದಲನೇ ಪುಟದಿಂದ

ಸ್ನಾತಕೋತ್ತರ ಕೇಂದ್ರಕ್ಕೆ ಆಗಮಿಸುವ ಮಕ್ಕಳಿಗೆ ಸೂಕ್ತ ಸಾರಿಗೆ ವ್ಯವಸ್ಥೆ ಒದಗಿಸಬೇಕಿದೆ. ಜೊತೆಗೆ ಹತ್ತಿರದಲ್ಲಿಯೇ ಉತ್ತಮ ಗುಣಮಟ್ಟದ ವಸತಿ ನಿಲಯ ಅಗತ್ಯವಾಗಿದೆ. ಅಲ್ಲದೇ ರಸ್ತೆ, ನೀರು ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕಿದೆ. ಇದಕ್ಕೆ ನನ್ನ ಶಾಸಕರ ಅಭಿವೃದ್ಧಿ ಅನುದಾನದಲ್ಲಿ ಅಗತ್ಯದ ಅನುದಾನ ಒದಗಿಸಲು ಬದ್ಧ ಎಂದು ತಿಳಿಸಿದರು.

ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ.ಬಿ. ಗುಡಸಿ ಮಾತನಾಡಿ, ಸಚಿವ ಎಚ್.ಕೆ. ಪಾಟೀಲರ ಕನಸಿನ ಕೂಸು ಈ ಗದಗಿನ ಸ್ನಾತಕೋತ್ತರ ಕೇಂದ್ರ. ಸದ್ಯ ಮೊದಲ ಹಂತದ ಕಾಮಗಾರಿ ಪೂರ್ಣವಾಗಿದ್ದು, ಉಳಿದ ಕಾಮಗಾರಿ ಪೂರ್ಣಗೊಳಿಸುವ ವಿಶ್ವಾಸ ಇದೆ ಎಂದರು.

ಈ ಸಂದರ್ಭದಲ್ಲಿ ಸ್ನಾತಕೊತ್ತರ ಕೇಂದ್ರದ ಸಿಂಡಿಕೇಟ್ ಸದಸ್ಯರಾದ ರಾಬರ್ಟ ಗಡ್ಡಾಪುರ, ಮಹೇಶ ಹಲ್ಲಣ್ಣವರ, ರತ್ನಾ ಪಾಟೀಲ, ಶಾಮ್ ಮಲ್ಲನಗೌಡರ, ಮಂಜುಳಾ, ಪ್ರಕಾಶ ಹೊಸಮನಿ, ಕಳಸಾಪುರ ಗ್ರಾ.ಪಂ ಅಧ್ಯಕ್ಷೆ ಅನುಸೂಯಾ ಬೆಟಗೇರಿ, ಕರ್ನಾಟಕ ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯಮಾಪನ) ಪ್ರೊ. ಎನ್.ವೈ. ಮಟ್ಟಿಹಾಳ, ಆಡಳಿತಾಧಿಕಾರಿ ಮಲ್ಲಿಕಾರ್ಜುನ ನಾಯಕ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ ಇದ್ದರು.

ಕರ್ನಾಟಕ ವಿಶ್ವ ವಿದ್ಯಾಲಯದ ಕುಲಸಚಿವ (ಆಡಳಿತ) ಡಾ.ಎ. ಚೆನ್ನಪ್ಪ ಅತಿಥಿಗಳನ್ನು ಸ್ವಾಗತಿಸಿದರು. ಜಾವೀದ್ ಹಾಗೂ ಸಂಗಡಿಗರು ನಾಡಗೀತೆ ಪ್ರಸ್ತುತಪಡಿಸಿದರು. ಲಕ್ಷ್ಮೀ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಬಸವರಾಜ ಕೊಳ್ಳಳ್ಳಿ ವಂದಿಸಿದರು.

# ಹಿಂದೂ ಮಹಾಗಣಪತಿ ವಿಸರ್ಜನೆ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಪಟ್ಟಣದಲ್ಲಿ ಹಿಂದೂ ಮಹಾಗಣಪತಿ ಮೂರ್ತಿ ವಿಸರ್ಜನಾ ಮಹೋತ್ಸವ ಮಂಗಳವಾರ ಅದ್ದೂರಿಯಾಗಿ ಜರುಗಿತು. ವಿಶ್ವಹಿಂದೂ ಪರಿಷತ್, ಭಜರಂಗದಳ ವತಿಯಿಂದ ಪಟ್ಟಣದ ಕೋಟೆ ಆಂಜನೇಯ ದೇವಸ್ಥಾನ ಪಕ್ಕದಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಲಾಗಿತ್ತು.

11 ದಿನಗಳ ಕಾಲ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಕೊನೆಯ ದಿನ ಮೂರ್ತಿ ವಿಸರ್ಜನಾ ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಭಾಗವಹಿಸಿದ್ದವು. ಪಟ್ಟಣದ ಹರಿಹರ ಸರ್ಕಲ್‌ನಿಂದ ಪ್ರಾರಂಭವಾದ ಹಿಂದೂ ಮಹಾಗಣಪತಿ ವಿಸರ್ಜನಾ ಮಹೋತ್ಸವ ಪಟ್ಟಣದ ಇಜಾರಿ ಶಿರಸಪ್ಪ ವೃತ್ತ, ಹಳೇ ಬಸ್ ನಿಲ್ದಾಣ ಹಾಗೂ ಐಬಿ ವೃತ್ತದ ಮೂಲಕ ಸಾಗಿ ನಾಯ್ಕನ ಕೆರೆಯಲ್ಲಿ ಗಣಪತಿ ವಿಸರ್ಜನೆ ಮಾಡಲಾಯಿತು.

ಮುಹಮ್ಮದ್ ಪೈಗಂಬರರ ಜಯಂತ್ಯುತ್ಸವದಲ್ಲಿ ಎಸ್.ಡಿ. ಮಕಾನದಾರ

# ಪೈಗಂಬರರ ತತ್ವ ಸಂದೇಶಗಳು ಮಾರ್ಗದರ್ಶಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಹಜರತ್ ಮುಹಮ್ಮದ ಪೈಗಂಬರರ ತತ್ವ-ಸಂದೇಶಗಳು ನಮ್ಮ ಜೀವನಕ್ಕೆ ಮಾರ್ಗದರ್ಶನಗಳಾಗಿದ್ದು, ಹೆಸರಿಗೆ ಮಾತ್ರ ಆಚರಣೆಯಾಗದೇ ಅರ್ಥಪೂರ್ಣವಾಗಿ ಆಚರಿಸುತ್ತಿರುವುದು ಶ್ಲಾಘನೀಯ ಎಂದು ಗದಗ ಜಿಲ್ಲಾ ವಕ್ಫ ಕಮಿಟಿಯ ಉಪಾಧ್ಯಕ್ಷ ಎಸ್.ಡಿ. ಮಕಾನದಾರ ಅಭಿಪ್ರಾಯಪಟ್ಟರು.



ಇಲ್ಲಿಯ ತಾಡಪತ್ರಿ ಜಮಾತ್ ಮಜೀದ್ ಕಮಿಟಿ ಹಮ್ಮಿಕೊಂಡಿದ್ದ ಮುಹಮ್ಮದ್ ಪೈಗಂಬರರ ಜಯಂತ್ಯುತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪೈಗಂಬರರು ಈ ಪ್ರಪಂಚ ಅಂಧಕಾರದಲ್ಲಿ ಮುಳುಗಿದಾಗ ದಿವ್ಯ ಜ್ಯೋತಿಯಾಗಿ ಅವತರಿಸಿದರು. ಪೈಗಂಬರರು ಬಸವಾದಿ ಶರಣರಂತೆ ಸಮಾಜದಲ್ಲಿ ಪ್ರೀತಿ, ವಿಶ್ವಾಸ, ಬಾತೃತ್ವ, ಸ್ನೇಹವನ್ನು ಬೆಳೆಸಲು ಜಾಗೃತಿ ಮೂಡಿಸಿದರು. ಹಿಂದೂ-ಮುಸಲ್ಮಾನರ ಸಾಮರಸ್ಯದ ವೇದಿಕೆಯು ಈ ಕಾರ್ಯಕ್ರಮದಲ್ಲಿ ಕಂಡು ಬಂದಿದ್ದು, ಆಚರಣೆ ಅರ್ಥಪೂರ್ಣವಾಗಿದೆ. ಈ ಶಾದಿ ಮಹಲ್ ಅಭಿವೃದ್ಧಿಗಾಗಿ ಸರಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್ ಅವರಿಗೆ ಮನವಿ ಸಲ್ಲಿಸಿ 5 ಲಕ್ಷ ರೂಗಳ ಅನುದಾನ ಒದಗಿಸುವುದಾಗಿ ಭರವಸೆ ನೀಡಿದರು.

ಗ್ರಾ.ಪಂ ಸದಸ್ಯ ಬಸವರಾಜ ಯಲಿಶಿರುಂದ ಮಾತನಾಡಿ, ಗ್ರಾ.ಪಂ 15ನೇ ಹಣಕಾಸು ಯೋಜನೆಯಲ್ಲಿ ಅಪೂರ್ಣ ಕಟ್ಟಡಕ್ಕೆ ಅನುದಾನ ಒದಗಿಸುವ ಭರವಸೆ ನೀಡಿದರು. ಅಧ್ಯಕ್ಷತೆ ವಹಿಸಿದ್ದ ತಾಡಪತ್ರಿ ಜಮಾತ್ ಮಜೀದ್ ಕಮಿಟಿಯ ಅಧ್ಯಕ್ಷ ಮರ್ದಾನಸಾಬ ದೊಡ್ಡಮನಿ ಮಾತನಾಡಿ, ಅಪೂರ್ಣವಾಗಿರುವ ಶಾದಿ ಮಹಲ್ ಕಟ್ಟಡಕ್ಕೆ ಇನ್ನೂ 25 ಲಕ್ಷ ರೂ ಅವಶ್ಯವಿದ್ದು, ಗ್ರಾಮದ ಗಣ್ಯರು ಸಹಾಯ-ಸಹಕಾರ ನೀಡಬೇಕೆಂದರು.

ಹಜ್ ಯಾತ್ರೆಯನ್ನು ಯಶಸ್ವಿಯಾಗಿ ಪೂರೈಸಿ ಬಂದಿರುವ ಅಬ್ದುಲ್‌ರಪೂಸಾಬ ಯರಗುಡಿ, ಕರೀಮಸಾಬ ಯರಗುಡಿ, ಅಲ್ಲಾಭಕ್ಷಿ ತಾಡಪತ್ರಿ, ಶಮನಸಾಬ ಹಮಸಾಗರ, ಗೂಡುಸಾಬ ತಾಡಪತ್ರಿ, ಫಾರೂಕ ಹಮಸಾಗರ, ಶಫಿವುಲ್ಲಾ ಯರಗುಡಿ ಅವರನ್ನು ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ನೂತನ ಮಜೀದ್ ನಿರ್ಮಾಣದ ಭೂಮಿ ಪೂಜೆಯನ್ನು ಮೌಲಾನಾ ಸಲೀಮ ಸಖಾಫಿ ಅವರ ನೇತೃತ್ವದಲ್ಲಿ ವಿಧಿ ವಿಧಾನಗಳೊಂದಿಗೆ ನೆರವೇರಿಸಲಾಯಿತು.

ಮಕ್ಕಳು ಮುಹಮ್ಮದ್ ಪೈಗಂಬರರ ಜೀವನ ಸಂದೇಶಗಳನ್ನು ಹೇಳಿದರು. ಗ್ರಾ.ಪಂ ಸದಸ್ಯೆ ಹಮೀನಾ ಹುಬ್ಬಳ್ಳಿ, ಜಮಾತ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು. ಎಸ್.ಎಂ. ಢಾಲಾಯತ ಸ್ವಾಗತಿಸಿದರು. ಎಂ.ಎಂ. ಹುಬ್ಬಳ್ಳಿ ನಿರೂಪಿಸಿದರು. ನೂರಹ್ಮದ ಯರಗುಡಿ ವಂದಿಸಿದರು.

ಯುವ ಮುಖಂಡ ವೀರಯ್ಯ ಗಂಧದ ಮಾತನಾಡಿ, ಬಿ.ಆರ್. ಯಾವಗಲ್ ಅವರು ಶಾಸಕರಾಗಿದ್ದಾಗ ಶಾದಿ ಮಹಲ್ ಕಟ್ಟಡ ನಿರ್ಮಾಣಕ್ಕೆ 50 ಲಕ್ಷ ರೂಗಳ ಅನುದಾನ ಒದಗಿಸಿದ್ದರು. ಈ ಕಟ್ಟಡಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರಿಗೂ ಸಹ ಮನವಿ ಸಲ್ಲಿಸಲಾಗಿದೆ. ಗ್ರಾಮದಲ್ಲಿ ಹಿಂದೂ-ಮುಸಲ್ಮಾನ ಭಾಂದವರು ಸಾಮರಸ್ಯದಿಂದ ಇದ್ದು ಎಲ್ಲ ಹಬ್ಬಗಳನ್ನೂ ಸ್ನೇಹ ಭಾವದಿಂದ ಆಚರಿಸಲಾಗುತ್ತಿದೆ ಎಂದರು.




ಧಾರವಾಡದ ಚೇತನ ಫೌಂಡೇಶನ್ ಕರ್ನಾಟಕ ವತಿಯಿಂದ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನಲ್ಲಿ ಇತ್ತೀಚೆಗೆ ಜರುಗಿದ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ 14ನೇ ಪುಣ್ಯಸ್ಮರಣೋತ್ಸವ ಹಾಗೂ ಶಿಕ್ಷಕರ ದಿನಾಚರಣೆ ಸಮಾರಂಭದಲ್ಲಿ ಮುಂಡರಗಿಯ ಈಶ್ವರಿ ಮಹಿಳಾ ಫೌಂಡೇಶನ್ ಅಧ್ಯಕ್ಷರಾದ ಪ್ರಭಾವತಿ ಬೆಳವಣಕಿಮಠ, ಮದರ ತೇರೆಸಾ ಮಹಿಳಾ ಟ್ರಸ್ಟ್‌ನ ಸಂಸ್ಥಾಪಕಿ ಮಂಜುಳಾ ಇಟಗಿ, ಕೋಟೆ ಶಾಲೆ ದೈಹಿಕ ಶಿಕ್ಷಕಿ ಶಾಂತಾ ಇಮರಾಪೂರ ಅವರ ಸಾಧನೆ ಗುರುತಿಸಿ ಅವರಿಗೆ ಸಾವಿತ್ರಿ ಫುಲೆ ರಾಷ್ಟ್ರೀಯ ಪ್ರಶಸ್ತಿ ನೀಡಿ, ಸನ್ಮಾನಿಸಲಾಯಿತು.

## ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ಸೌಲಭ್ಯಗಳ ದುರ್ಬಳಕೆಯಾಗದಂತೆ ಎಚ್ಚರಿಕೆ ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಬಡತನ ನಿರ್ಮೂಲನೆಗಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಯಿತು. ಇದರಿಂದ ಬಡವರ ಬಾಳಲ್ಲಿ ಅಗಾಧವಾದ ಆರ್ಥಿಕ ಸ್ವಾವಲಂಬನೆ ಮೂಡುವುದರೊಂದಿಗೆ ಕ್ರಾಂತಿಕಾರಕ ಬದಲಾವಣೆ ಸಾಧ್ಯವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಗ್ಯಾರಂಟಿ ಯೋಜನೆಯ ಅನುಷ್ಠಾನದಿಂದ 1.10 ಕೋಟಿ ಕುಟುಂಬಗಳನ್ನು ಬಡತನ ರೇಖೆಯಿಂದ ಮೇಲೆತ್ತಲಾಗಿದೆ. ಬಡಜನರಿಗೆ ಆತ್ಮಾಭಿಮಾನ, ಸ್ವಾಭಿಮಾನ ಕುದುರಿಸುವ ಕೆಲಸವಾಗಿದೆ ಎಂದರು.

ಪಂಚಗ್ಯಾರಂಟಿ ಯೋಜನೆಗಳಲ್ಲಿ ಶೇ.100ರಷ್ಟು ಸಾಧನೆಯಾಗಬೇಕು. ಈ ನಿಟ್ಟಿನಲ್ಲಿ ಸಂಬಂಧಿತ ಅಧಿಕಾರಿಗಳು ಸೇವಾ ಮನೋಭಾವದಿಂದ ಯೋಜನೆಯ ಸೌಲಭ್ಯ ಮನೆಮನೆಗೆ ತಲುಪಿಸುವ ಕೆಲಸ ಮಾಡಬೇಕು. ಯೋಜನೆಗಳ, ಸೌಲಭ್ಯಗಳ ದುರ್ಬಳಕೆಯಾಗದಂತೆ ಎಚ್ಚರಿಕೆ ವಹಿಸಬೇಕು. ಪ್ರಜಾಪ್ರಭುತ್ವ ದಿನಾಚರಣೆಯ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಗದಗ ಜಿಲ್ಲೆ ಮುಂಚೂಣಿಯಲ್ಲಿದ್ದುದು ಸಂತಸದ ವಿಷಯವಾಗಿದೆ. ಅಂತೆಯೇ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿಯೂ ಸಹ ಜಿಲ್ಲೆಯು ಅಗ್ರ ಸ್ಥಾನದಲ್ಲಿರುವಂತೆ ಕ್ರಮ ವಹಿಸಬೇಕು ಎಂದು ಸಚಿವರು ನಿರ್ದೇಶನ ನೀಡಿದರು.



ಗೃಹಜ್ಯೋತಿ ಯೋಜನೆಯಡಿ ಗದಗ ಗ್ರಾಮಿಣ ಉಪವಿಭಾಗದಲ್ಲಿ 52909 ಸ್ಥಾವರಗಳು ಹಾಗೂ ಶಹರ ವಿಭಾಗದಲ್ಲಿ 45024 ಸ್ಥಾವರಗಳ ನೋಂದಣಿ ಮೂಲಕ ಶೇ. 92.9 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಹೆಸ್ಕಾಂ ಅಧಿಕಾರಿಗಳು ಸಭೆಗೆ ತಿಳಿಸಿದರು.

ಗೃಹಲಕ್ಷ್ಮೀ ಯೋಜನೆಯಡಿ ಗದಗ ತಾಲೂಕಿನ ಯಜಮಾನಿ ಕಾರ್ಡ್ ಹೊಂದಿರುವವರ ಸಂಖ್ಯೆ ಒಟ್ಟು 78009 ಇದ್ದು, ಆ ಪೈಕಿ 77611 ಫಲಾನುಭವಿಗಳ ನೋಂದಣಿಯಾಗಿದೆ. 76291 ಫಲಾನುಭವಿಗಳಿಗೆ ಡಿಬಿಟಿ ಮೂಲಕ ಖಾತೆಗೆ ನೇರ ಪಾವತಿಸಲಾಗುತ್ತಿದೆ. ಎನ್‌ಪಿಸಿಐ ವಿಫಲ ವರದಿ (ಜಿಎಸ್‌ಟಿ/ಐಟಿ) ತೊಂದರೆಗಳಿಂದ 1320 ಅರ್ಜಿಗಳು ಬಾಕಿ ಉಳಿದಿವೆ ಎಂದು ಗದಗ ಸಿಡಿಪಿಒ ಹುಲಿಗೆಮ್ಮ ಜೋಗೇರ ಸಭೆಗೆ ಮಾಹಿತಿ ಒದಗಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷರಾದ ಅಶೋಕ ಮಂದಾಲಿ ಮಾತನಾಡಿ, ರಾಜ್ಯ ಸರ್ಕಾರ ಬಡಜನರ ಶ್ರೇಯೋಭಿವೃದ್ಧಿಗೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಪ್ರತಿ ಕುಟುಂಬಕ್ಕೆ ಪ್ರತಿ ತಿಂಗಳಿಗೆ 5 ಸಾವಿರ ರೂ.ಗಳಂತೆ ವಾರ್ಷಿಕ 60 ಸಾವಿರ ರೂ. ಅರ್ಹ ಫಲಾನುಭವಿಯ ಖಾತೆ ನೇರವಾಗಿ ಜಮಾ ಮಾಡುವ ಉದ್ದೇಶ ಈ ಯೋಜನೆಯದ್ದಾಗಿದೆ. ಜಿಲ್ಲೆಯಲ್ಲಿ ಪ್ರಥಮ ತಾಲುಕಾ ಮಟ್ಟದ ಗ್ಯಾರಂಟಿ ಪ್ರಗತಿ ಪರಿಶೀಲನಾ ಸಮಿತಿ ಸಭೆ ನಡೆಸಲಾಗುತ್ತಿದೆ. ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗದಗ ವಿಧಾನಸಭಾ ಕ್ಷೇತ್ರವನ್ನು ರಾಜ್ಯದಲ್ಲಿಯೇ ಪ್ರಥಮ ಸ್ಥಾನಕ್ಕೆ ತರಲು ಎಲ್ಲರೂ ಶ್ರಮಿಸೋಣ ಎಂದರು.

ಅನ್ನಭಾಗ್ಯ ಯೋಜನೆಯಡಿ ಡಿಬಿಟಿ ಮೂಲಕ ನಗದು ವರ್ಗಾವಣೆಯನ್ನು ಜುಲೈ-2023ರಿಂದ ಆರಂಭಿಸಲಾಯಿತು. ಪ್ರತಿ ಸದಸ್ಯರಿಗೆ ಹೆಚ್ಚುವರಿ 5 ಕೆಜಿ ಅಕ್ಕಿಯ ಮೊತ್ತ 170ರಂತೆ 6,43,423 ಜನರಿಗೆ ಜುಲೈ-2023ರಲ್ಲಿ ಪಾವತಿಸಲಾಯಿತು. ನಂತರ ನಿರಂತರವಾಗಿ ಪ್ರತಿ ತಿಂಗಳು ಪಾವತಿಸಲಾಗುತ್ತಿದೆ. ಜೂನ್ 2024ರಲ್ಲಿ 7,59,604 ಸದಸ್ಯರಿಗೆ ಡಿಬಿಟಿ ಮುಲಕ ಹೆಚ್ಚುವರಿ ಅಕ್ಕಿಯ ಮೊತ್ತವನ್ನು ಪಾವತಿಸಲಾಗಿದೆ ಎಮದು ಮಾಹಿತಿ ನೀಡಿದರು.

ಶಕ್ತಿ ಯೋಜನೆಯಿಂದ ವಾ.ಕ. ರಾ.ಸಂಸ್ಥೆಯ ಗದಗ ವಿಭಾಗಕ್ಕೆ ಸೆಪ್ಟೆಂಬರ್ 2024ರವರೆಗೆ 65,46,66,516 ರೂ. ಆದಾಯ ಬಂದಿದೆ. ಒಟ್ಟಾರೆ ಮಹಿಳಾ ಫಲಾನುಭವಿಗಳಿಂದ 36,78,23,531 ಆದಾಯವಾಗಿದೆ ಎಂದು ಸಭೆಗೆ ತಿಳಿಸಿದರು.

ಅರ್ಹರಿಗೆ ಗ್ಯಾರಂಟಿ ಯೋಜನೆಗಳ ಸೌಲಭ್ಯ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಕಾರ್ಯನಿರ್ವಹಿಸಬೇಕು. ದೇಶದಲ್ಲಿಯೇ ಮೊಟ್ಟ ಮೊದಲ ಬಾರಿಗೆ ರಾಜ್ಯ ಸರ್ಕಾರ 50 ಸಾವಿರ ಕೋಟಿ ರೂ.ಗಳ ಯೋಜನೆಯನ್ನು ಭ್ರಷ್ಟಾಚಾರವಿಲ್ಲದೇ ಜನರಿಗೆ ತಲುಪಿಸುವ ಕೆಲಸ ಮಾಡಿದೆ. ಇದು ಸರ್ಕಾರದ ಮಹತ್ಸಾಧನೆಯಾಗಿದೆ ಎಂದು ಹೇಳಿದರು.

**– ಎಚ್.ಕೆ. ಪಾಟೀಲ.**
**ಜಿಲ್ಲಾ ಉಸ್ತುವಾರಿ ಸಚಿವರು.**

2022-23 ನೇ ಶೈಕ್ಷಣಿಕ ಸಾಲಿನಲ್ಲಿ ಅಧ್ಯಯನ ಮಾಡಿ 2023ರಲ್ಲಿ ತೇರ್ಗಡೆಯಾದ ದಿನಾಂಕದಿಂದ 180 ದಿನ ಕಳೆದರೂ ಉದ್ಯೋಗ ಲಭಿಸದ ಪದವೀಧರ ನಿರುದ್ಯೋಗಿಗಲಿಗೆ ಪ್ರತಿ ತಿಂಗಳು 3 ಸಾವಿರ ರೂ ನಿರುದ್ಯೋಗ ಭತ್ಯೆ ಹಾಗೂ ಡಿಪ್ಲೊಮಾ ಪಾಸಾದ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು 1,500 ರೂ ನಿರುದ್ಯೋಗ ಭತ್ಯೆ ನೀಡಲಾಗುತ್ತದೆ. ಯುವನಿಧಿ ಯೋಜನೆಯಡಿ ಇದುವರೆಗೆ 1171 ಅಭ್ಯರ್ಥಿಗಳ ನೋಂದಣಿಯಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಗ್ಯಾರಂಟಿ ಸಮಿತಿಯ ಸದಸ್ಯರುಗಳಾದ ಶಂಭು ಎಸ್.ಕಾಳೆ, ಮೀನಾಕ್ಷಿ ಬೆನಕಣ್ಣವರ, ದಯಾನಂದ ಪವಾರ, ಸಂಗು ಕರಕಲಕಟ್ಟಿ, ನಿಂಗಪ್ಪ ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯಕರ, ದೇವರೆಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಗಣೇಶ ಸಿಂಗ್ ಮಿಟಾಡ್, ಮಲ್ಲಪ್ಪ ಬಾರಕೇರ, ಬಾಷಾ ಮಲ್ಲಸಮುದ್ರ, ಕೃಷ್ಣಗೌಡ ಎಚ್.ಪಾಟಿಲ, ಸಾವಿತ್ರಿ ಹೂಗಾರ ಸೇರಿದಂತೆ ಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.





■ ಮಹಮ್ಮದ್ ಪೈಗಂಬರ್ ಜಯಂತಿ ಅಂಗವಾಗಿ ಗುರುವಾರ ಸಂಜೆ ಗದಗನಲ್ಲಿ ಮುಸ್ಲಿಂ ಬಾಂಧವರು ಮೆರವಣಿಗೆ ನಡೆಸಿದರು.


■ ನಗರದ ವಿವಿಧ ರಸ್ತೆಗಳಲ್ಲಿ ಡಿಜೆ ಮೂಲಕ ವಿವಿಧ ಹಾಡುಗಳಿಗೆ ಯುವಕರ ಪಡೆ ಕುಣಿದು ಕುಪ್ಪಳಿಸಿತು.

# ಮೆರವಣಿಗೆಯ ವಿವಿಧ ದೃಶ್ಯಗಳು










VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka